(ಆ) ಹಾಗಿದ್ದರೆ, ಎಷ್ಟು ವರ್ಷಕ್ಕೊಮ್ಮೆ ಪೋಲೀಸ್ ಸಿಬ್ಬಂದಿಗೆ ಸಮವಸ್ತ್ರ ನೀಡಲಾಗುವುದು ;

(ಇ) ಕಳೆದ ಬಾರಿ ಯಾವಾಗ ಸಮವಸ್ತ್ರ ನೀಡಲಾಗಿದೆ ? (ವಿವರ ನೀಡುವುದು)

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂ–59/ಕಾ.ಸೂ. 3588/700 ಪ್ರತಿಗಳು/21–07–2015

(ಇ) ಸಣ್ಣ ಕೈಗಾರಿಕೆಗಳನ್ನು ಅಭಿವೃದ್ಧಿಪಡಿಸುವ ಕಾರ್ಯವನ್ನು ಯಾರಿಗೆ ವಹಿಸಲಾಗಿದೆ ಮತ್ತು ಯಾವಾಗ ಅಭಿವೃದ್ಧಿಪಡಿಸಲಾಗುವುದು ? (ಮಾಹಿತಿ ನೀಡುವುದು)

## ರಾಜ್ಯದಲ್ಲಿ ಸರ ಕಳ್ಳತನ ಹೆಚ್ಚಾಗಿ ನಡೆಯುತ್ತಿರುವ ಬಗ್ಗೆ

**ಶ್ರೀ ನಾರಾಯಣ ಸಾ. ಬಾಂಡಗೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೭೫ (೧೪೪೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ ಕಳ್ಳತನ ಪ್ರಕರಣಗಳು ದಿನೇ ದಿನೇ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಕಳೆದ ೧ ವರ್ಷದಿಂದ ದಾಖಲಾಗಿರುವ ದೂರುಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ಆ ಪೈಕಿ ಪತ್ತೆ ಹಚ್ಚಲಾದ ಪ್ರಕರಣಗಳು ಎಷ್ಟು ; ಬಾಕಿ ಇರುವ ಪ್ರಕರಣಗಳನ್ನು ಶೀಘ್ರದಲ್ಲಿ ಪತ್ತೆ ಹಚ್ಚಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಕಳ್ಳರಿಂದ ವಶಪಡಿಸಿಕೊಂಡಿರುವ ಆಭರಣಗಳ ಮೌಲ್ಯ ಎಷ್ಟು ; ಅವುಗಳನ್ನು ಸಂಬಂಧಪಟ್ಟವರಿಗೆ ವಿತರಿಸಲು ಕ್ರಮ ಕೈಗೊಳ್ಳಲಾಗಿದೆಯೇ ? (ವಿವರ ನೀಡುವುದು)



## ರಾಜ್ಯದಲ್ಲಿ ಸರಗಳ್ಳರ ಹಾವಳಿ ಜಾಸ್ತಿಯಾಗುತ್ತಿರುವ ಬಗ್ಗೆ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೧೭೭೬ (೨೧೦೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರಗಳ್ಳರ ಹಾವಳಿ ಇತ್ತೀಚೆಗೆ ಜಾಸ್ತಿಯಾಗಿದ್ದು ನಿಯಂತ್ರಿಸುವ ನಿಟ್ಟಿನಲ್ಲಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ಇದುವರೆಗೆ ಇಂತಹ ಪ್ರಕರಣಗಳಲ್ಲಿ ಬಾಗಿಯಾದ ಎಷ್ಟು ಜನ ಸರಗಳ್ಳರನ್ನು ಬಂಧಿಸಲಾಗಿದೆ ; ಎಷ್ಟು ಮಂದಿಗೆ ಶಿಕ್ಷೆಗೊಳಪಡಿಸಲಾಗಿದೆ ?

## ರಾಜ್ಯದ ಪೋಲೀಸ್ ಸಿಬ್ಬಂದಿಗೆ ಸಮವಸ್ತ್ರ ನೀಡುವ ಬಗ್ಗೆ

**ಶ್ರೀ ಜಗ್ಗೇಶ್ (ನಾಮನಿರ್ದೇಶನ ಹೊಂದಿದವರು) :–**

೧೭೭೭ (೨೧೦೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪೋಲೀಸ್ ಸಿಬ್ಬಂದಿಗೆ ಸರ್ಕಾರದಿಂದ ಸಮವಸ್ತ್ರ ನೀಡಲಾಗುತ್ತಿದೆಯೇ ;

## ಪಶುವೈದ್ಯಾಧಿಕಾರಿಗಳ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಮರಿತಿಬ್ಬೆಗೌಡ (ಶಿಕ್ಷಕರ ಕ್ಷೇತ್ರ) :–**

೧೭೭೨ (೨೧೮೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಖಾಲಿ ಇರುವ ಪಶುವೈದ್ಯಾಧಿಕಾರಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸದರಿ ಹುದ್ದೆಗಳು ಯಾವ ಸಮಯದಿಂದ ಖಾಲಿ ಉಳಿದಿವೆ ;

(ಇ) ಬಡ್ತಿ ಮೂಲಕ ನೀಡಬೇಕಾಗಿರುವ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಸದರಿ ಹುದ್ದೆಗಳಿಗೆ ಯಾವ ಕಾಲಮಿತಿಯಲ್ಲಿ ಬಡ್ತಿ ನೀಡಲು ಕ್ರಮಗೊಳ್ಳಲಾಗುವುದು ;

(ಉ) ನೇರ ನೇಮಕದ ಖಾಲಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಿಕೊಡಲಾಗುವುದು ?

## ಪೋಲಿಸ್ ಇಲಾಖೆ ಖಾಲಿ ಹುದ್ದೆಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೭೩ (೨೧೮೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಪೋಲಿಸ್ ಇಲಾಖೆಯಲ್ಲಿ ಮಂಜೂರು ಆಗಿರುವ ಹುದ್ದೆಗಳ ಸಂಖ್ಯೆ ಎಷ್ಟು ಖಾಲಿ ಇರುವ ಹುದ್ದೆಗಳ



ಸಂಖ್ಯೆ ಎಷ್ಟು ಭರ್ತಿಮಾಡಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ಮತ್ತು ಠಾಣಾವಾರು ವಿವರ ನೀಡುವುದು)

(ಆ) ಜಿಲ್ಲೆಯಲ್ಲಿ ಪೋಲಿಸ್ ಹುದ್ದೆಗಳು ಖಾಲಿ ಇರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ ಈ ಕುರಿತು ಕೈಗೊಂಡ ಕ್ರಮಗಳೇನು ;

(ಈ) ಹಾಗಿದ್ದಲ್ಲಿ ಹೊಸದಾಗಿ ನೇಮಕಾತಿಯನ್ನು ಜರುಗಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ಇದ್ದಲ್ಲಿ ಯಾವ ಕಾಲಮಿತಿಯೊಳಗೆ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲು ಉದ್ದೇಶಿಸಲಾಗಿದೆ ? (ವಿವರ ನೀಡುವುದು)

## ಕೈಗಾರಿಕೆಗಳ ಅಭಿವೃದ್ಧಿಗಾಗಿ ಜಮೀನು ಮಂಜೂರಾಗಿರುವ ಬಗ್ಗೆ.

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೭೪ (೨೧೮೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆಗಳ ಅಭಿವೃದ್ಧಿಗಾಗಿ ಜಮೀನು ಮಂಜೂರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ ಮಂಜೂರಾದ ಜಮೀನಿನ ವಿಸ್ತೀರ್ಣವೆಷ್ಟು ಹಾಗೂ ಬಿಡುಗಡೆ ಮಾಡಿರುವ ಹಣ ಎಷ್ಟು ; (ಮಾಹಿತಿ ನೀಡುವುದು)

(ಆ) ಈ ಜಮೀನುಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಿದ ಪ್ರದೇಶ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಕೈಗಾರಿಕೆಗಳನ್ನು ಸ್ಥಾಪಿಸದೇ ಖಾಲಿ ಉಳಿದ ಜಮೀನು ಎಷ್ಟು ;

(ಈ) ಖಾಲಿ ಉಳಿದ ಜಮೀನುಗಳ ಭೂಸ್ವಾಧೀನವನ್ನು ರದ್ದುಪಡಿಸಿ, ಮರಳಿ ರೈತರಿಗೆ ಕೊಡಲು ಸರ್ಕಾರ ಉದ್ದೇಶಿಸಿದೆಯೆ ;

(ಉ) ಹಾಗಿದ್ದಲ್ಲಿ, ಈ ಕುರಿತು ಕೈಗೊಂಡ ಕ್ರಮಗಳೇನು ?

## ಬೆಂಗಳೂರು ಮೆಟ್ರೋ ರೈಲು ನಿಗಮದ ವಸತಿ ಗೃಹದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೭೭೦ (೨೧೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮೆಟ್ರೋ ರೈಲು ನಿಗಮದಲ್ಲಿ ಹಾಲಿ ಎಷ್ಟು ಜನ ನೌಕರರು ಯಾವ ಯಾವ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿದ್ದಾರೆ ; (ಹುದ್ದೆವಾರು ವಿವರ ನೀಡುವುದು)

(ಆ) ನೌಕರರಿಗಾಗಿ ಸಂಸ್ಥೆಯು ವಸತಿ ಗೃಹಗಳನ್ನು ನಿರ್ಮಿಸಿದೆಯೇ;

(ಇ) ನಿರ್ಮಿಸಿದ್ದರೆ, ಲಭ್ಯವಿರುವ ವಸತಿ ಗೃಹಗಳೆಷ್ಟು ; ಇವುಗಳನ್ನು ಯಾವ ರೀತಿ ಯಾರಿಗೆ ಹಂಚಿಕೆ ಮಾಡಲಾಗಿದೆ ; (ವಿವರ ನೀಡುವುದು)

(ಈ) ವಸತಿ ಗೃಹಗಳನ್ನು ಜೇಷ್ಠತೆ ಆಧಾರದ ಮೇಲೆ ಹಂಚಿಕೆ ಮಾಡದೆ ಡಾರ್ಮೆಟ್ರಿಯನ್ನಾಗಿ ಪರಿವರ್ತಿಸಿರುವುದು ಸರಿಯೇ ;



(ಉ) ವಸತಿ ಗೃಹಗಳನ್ನು ಡಾರ್ಮೆಟ್ರಿಯನ್ನಾಗಿ ಪರಿವರ್ತಿಸುವ ಬದಲು ಜೇಷ್ಠತೆ ಆಧಾರದ ಮೇಲೆ ನೌಕರರಿಗೆ ನೀಡಿದ್ದರೆ ಸಂಸ್ಥೆಗೆ ಆಗುತ್ತಿದ್ದ ನಷ್ಟವೇನು?

## ರಾಜ್ಯದಲ್ಲಿರುವ ಜಾನುವಾರುಗಳ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :–**

೧೭೭೧ (೨೧೮೦) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಜಾನುವಾರುಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಜಾನವಾರುಗಳ ಸಂಖ್ಯೆ ದಿನೇದಿನೇ ಕಡಿಮೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದರೆ ಬಂದಿದ್ದಲ್ಲಿ, ಜಾನುವಾರುಗಳ ಸಂಖ್ಯೆ ಕಡಿಮೆಯಾಗಲು ಕಾರಣಗಳೇನು ; (ವಿವರ ನೀಡುವುದು)

(ಇ) ಜಾನುವಾರುಗಳ ಸಂಖ್ಯೆಯನ್ನು ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಸರ್ಕಾರದಲ್ಲಿ ಬಾಕಿ ಇರುವ ಕಡತಗಳನ್ನು ತ್ವರಿತವಾಗಿ ವಿಲೇವಾರಿ ಮಾಡುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೭೬೭ (೨೧೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಸರ್ಕಾರ ಕಡತ ವಿಲೇವಾರಿ ನಡೆಸಿದಾಗ ಎಷ್ಟು ಕಡತಗಳನ್ನು ವಿಲೇವಾರಿ ಮಾಡಲಾಯಿತು ; (ಇಲಾಖಾವಾರು ಮಾಹಿತಿ ನೀಡುವುದು)

(ಆ) ಕಡತ ವಿಲೇವಾರಿಯ ನಂತರ ವಿವಿಧ ಇಲಾಖೆಗಳಲ್ಲಿ ಬಾಕಿ ಇರುವ ಕಡತಗಳ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಇ) ಬಾಕಿ ಇರುವ ಕಡತಗಳಲ್ಲಿ ಒಂದು ತಿಂಗಳಿಗೂ ಹೆಚ್ಚು ಕಾಲ ಬಾಕಿ ಇರುವ ಕಡತಗಳ ಸಂಖ್ಯೆ ಎಷ್ಟು ; (ಇಲಾಖಾವಾರು ಮಾಹಿತಿ ನೀಡುವುದು)

(ಈ) ಬಾಕಿ ಇರುವ ಕಡತಗಳನ್ನು ವಿಲೇವಾರಿ ಮಾಡಲು ಕಾಲಮಿತಿಯನ್ನು ವಿವಿಧ ಇಲಾಖೆಗಳಿಗೆ ನಿಗದಿಪಡಿಸಿದೆಯೇ ?



## ಬಿ.ಬಿ.ಎಂ.ಪಿಯಲ್ಲಿನ ಗ್ರೂಪ್ 'ಡಿ' ನೌಕರರ ನೇಮಕಾತಿ ಪ್ರಕ್ರಿಯೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೭೬೮ (೨೧೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಖಾಲಿ ಇರುವ ಗ್ರೂಪ್ 'ಡಿ' ಹುದ್ದೆಗಳೆಷ್ಟು ;

(ಆ) ಸದರಿ ಹುದ್ದೆಗಳ ನೇಮಕಾತಿ ಪ್ರಕ್ರಿಯೆಗೆ ಯಾವ ದಿನಾಂಕದಂದು ಅಧಿಸೂಚನೆ ಹೊರಡಿಸಲಾಗಿದೆ ;

(ಇ) ಹೊರಡಿಸಲಾಗಿದ್ದಲ್ಲಿ, ಪ್ರಸ್ತುತ ನೇಮಕಾತಿ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಈ) ಯಾವ ಕಾಲಮಿತಿಯೊಳಗೆ ನೇಮಕಾತಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ?

## ಕೈಗಾರಿಕೆಗಳ ಸ್ಥಾಪನೆಗೆ ಮಂಜೂರಾತಿ ಜಮೀನುಗಳ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೭೬೯ (೨೧೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೈಗಾರಿಕೆಗಳ ಸ್ಥಾಪನೆಗಾಗಿ ಇಲ್ಲಿಯವರೆಗೆ ರೈತರ ಎಷ್ಟು ಜಮೀನನ್ನು ಸರ್ಕಾರ ವಶಪಡಿಸಿಕೊಂಡಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

## ರಾಜ್ಯದ ೧೯ ಅನುದಾನರಹಿತ ಕಾನೂನು ಮಹಾವಿದ್ಯಾಲಯಗಳನ್ನು ಸರ್ಕಾರದ ಸಹಾಯಾನುದಾನಕ್ಕೊಳಪಡಿಸುವ ಕುರಿತು.

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೧೭೬೫ (೨೧೭೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಅನುದಾನರಹಿತ ಕಾನೂನು ಕಾಲೇಜುಗಳನ್ನು ಸಹಾಯಾನುದಾನಕ್ಕೊಳಪಡಿಸಲು ಸರ್ಕಾರ ಹಾಲಿ ಮುದ್ದಣ್ಣ ಸಮಿತಿಯನ್ನು ರಚಿಸಿದ್ದು ಯಾವಾಗ; ಸದರಿ ಸಮಿತಿಯ ಶಿಫಾರಸ್ಸುಗಳೇನು ;

(ಆ) ದಿ: ೧೬.೧೧.೨೦೦೬ರ ಸರ್ಕಾರಿ ಆದೇಶದ ಪ್ರಕಾರ ವೇತನಕ್ಕೆ ಅನುಗುಣವಾಗಿ ನೇಮಕಗೊಳ್ಳುವ ಉಪನ್ಯಾಸಕರುಗಳಿಗೆ ನಿಗಧಿಪಡಿಸಿದ ಪದವಿ ಹಾಗೂ ಯಾವ ಯಾವ ವಿದ್ಯಾರ್ಹತೆಗಳನ್ನು ಕಡ್ಡಾಯಗೊಳಿಸಲಾಗಿದೆ ;

(ಇ) ಈ ಆದೇಶ ಹೊರಡಿಸುವ ಪೂರ್ವದಲ್ಲಿ ನೇಮಕಗೊಂಡ ಉಪನ್ಯಾಸಕರುಗಳಿಗೆ ದಿ: ೩.೧೦.೧೯೮೧ರ ಸರ್ಕಾರದ ಆದೇಶದಡಿ ವಿನಾಯ್ತಿ ನೀಡಲು ಅವಕಾಶವಿದೆಯೇ ;

(ಈ) ಇದ್ದರೆ ೧೯ ಅನುದಾನರಹಿತ ಕಾನೂನು ಕಾಲೇಜುಗಳಲ್ಲಿ ೨೦೦೯ರ ಪೂರ್ವದಲ್ಲಿ ನೇಮಕಾತಿ ಹೊಂದಿ ಕಾರ್ಯ



ನಿರ್ವಹಿಸುತ್ತಿರುವ ಉಪನ್ಯಾಸಕರುಗಳಿಗೆ ವಿನಾಯ್ತಿ ನೀಡಿ ಅವರುಗಳನ್ನು ಅನುದಾನಕ್ಕೆ ಒಳಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರೇಷ್ಮೆ ಬೆಳೆಗಾರರ ಸಮಸ್ಯೆ ಪರಿಹರಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೧೭೬೬ (೨೧೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ರೇಷ್ಮೆ ಪ್ರದೇಶದ ವಿಸ್ತೀರ್ಣವೆಷ್ಟು; ಎಷ್ಟು ರೈತರು ರೇಷ್ಮೆ ಉತ್ಪಾದನೆಯಲ್ಲಿ ತೊಡಗಿದ್ದಾರೆ ;

(ಆ) ೨೦೧೪–೧೫ನೇ ಸಾಲಿನಲ್ಲಿ ಒಟ್ಟು ಎಷ್ಟು ಪ್ರಮಾಣದ ರೇಷ್ಮೆ ಗೂಡುಗಳನ್ನು ಉತ್ಪಾದಿಸಲಾಗಿದೆ ;

(ಇ) ಪ್ರಸಕ್ತ ಸಾಲಿನಲ್ಲಿ ಈವರೆಗೆ ಎಷ್ಟು ಪ್ರಮಾಣದ ರೇಷ್ಮೆಗೂಡುಗಳನ್ನು ಉತ್ಪಾದಿಸಲಾಗಿದೆ ;

(ಈ) ಕಳೆದ ೨ ವರ್ಷಗಳಲ್ಲಿ ಪ್ರತಿ ಕೆ.ಜಿ. ರೇಷ್ಮೆ ಗೂಡಿಗೆ ಉತ್ಪಾದಕರು ಪಡೆದ ಗರಿಷ್ಠ, ಕನಿಷ್ಠ ಹಾಗೂ ಸರಾಸರಿ ಬೆಲೆ ಎಷ್ಟು; (ವರ್ಷಾವಾರು ವಿವರ ನೀಡುವುದು)

(ಉ) ಬೆಲೆ ಕುಸಿತದಿಂದಾಗಿ ರೈತರು ತೊಂದರೆಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ ಇದಕ್ಕೆ ಕಾರಣಗಳೇನು ; (ವಿವರ ನೀಡುವುದು) ಬೆಲೆ ಕುಸಿತಕ್ಕೆ ಕಾರಣಗಳನ್ನು ಸರ್ಕಾರ ಕಂಡು ಹಿಡಿದಿದೆಯೇ ?

## ರಾಯಚೂರು ಜಿಲ್ಲೆಯ ಇಲಾಖೆಗಳ ಆದಾಯ ಕುರಿತು

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೨ (೨೧೯೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ರಾಯಚೂರು ಜಿಲ್ಲೆಯಿಂದ ವಿವಿಧ ಇಲಾಖೆಗಳ ಮುಖಾಂತರ ವರ್ಷಕ್ಕೆ ಬರುವ ಒಟ್ಟು ಆದಾಯವೆಷ್ಟು ? (ಇಲಾಖೆವಾರು ವಿವರ ನೀಡುವುದು)

## ಹಟ್ಟಿ ಚಿನ್ನದ ಗಣಿಯಲ್ಲಿ ಉತ್ಪಾದನೆಯಾದ ಚಿನ್ನದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೩ (೨೧೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿರುವ ಹಟ್ಟಿ ಚಿನ್ನದ ಗಣಿಯಲ್ಲಿ ೨೦೧೪–೧೫ನೇ ಸಾಲಿನಲ್ಲಿ ಉತ್ಪಾದನೆಯಲ್ಲಿ ಚಿನ್ನದ ಪ್ರಮಾಣವೆಷ್ಟು ; ಉತ್ಪಾದನೆಯಾದ ಚಿನ್ನದ ಅಂದಾಜು ಮೊತ್ತವೆಷ್ಟು;

(ಆ) ಇದರಿಂದ ಸರ್ಕಾರಕ್ಕೆ ಬಂದಿರುವ ಲಾಭವೆಷ್ಟು ; (ವಿವರ ನೀಡುವುದು)



(ಇ) ಹಟ್ಟಿ ಚಿನ್ನದ ಗಣಿ ಸಂಸ್ಥೆಯಿಂದ ೨೦೧೪–೧೫ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯ ವ್ಯಾಪ್ತಿಯ ಅಭಿವೃದ್ಧಿ ಯೋಜನೆಗಾಗಿ ವೆಚ್ಚ ಮಾಡಿರುವ ಮೊತ್ತವೆಷ್ಟು ? (ಸಂಪೂರ್ಣ ವಿವರ ನೀಡುವುದು)

## ರಾಯಚೂರು ಜಿಲ್ಲೆಯಲ್ಲಿ ಪೊಲೀಸ್ ಠಾಣೆಯನ್ನು ಆರಂಭಿಸುವ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೪ (೨೧೭೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯ ವ್ಯಾಪ್ತಿಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ;

(ಆ) ಕಲಂ ೩೭೧(ಜೆ) ರನ್ವಯ ಪೊಲೀಸ್ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮವೇನು ;

(ಇ) ರಾಯಚೂರು ನಗರ ಹಾಗೂ ಮಾನ್ವಿ ತಾಲ್ಲೂಕುಗಳಲ್ಲಿ ನೂತನ ಪೊಲೀಸ್ ಠಾಣೆಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

(ಆ) ತಾಲ್ಲೂಕು ದೇವಾಂಗ ಸಮಾಜ ಇತ್ತೀಚೆಗೆ ಶ್ರೀ ದೇವರ ದಾಸಿಮಯ್ಯ ಪ್ರತಿಮೆ ಅನಾವರಣ ಮಾಡಲು ಮನವಿ ಸಲ್ಲಿಸಿದೆಯೇ;

(ಇ) ನಗರ ವ್ಯಾಪ್ತಿಯಲ್ಲಿ ಬರುವ ಯಾವ ವೃತ್ತದಲ್ಲಿ ಪ್ರತಿಮೆ ಅನಾವರಣ ಮಾಡಲು ಕ್ರಮಕೈಗೊಳ್ಳಲಾಗಿದೆ ಯಾವಾಗ ಅನುಮತಿ ನೀಡಿ ನೇಕಾರರ (ದೇವಾಂಗ) ಮನವಿಗೆ ಪುರಸ್ಕಾರ ನೀಡಲಾಗುವುದು?

## ಬಿಬಿಎಂಪಿಯ ವಾರ್ಡ್ ನಂ.೧೪೯ರ ರಸ್ತೆಗೆ ಬೇರೆ ಹೆಸರಿಡುವುದು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮ ನಿರ್ದೇಶನ) :–**

೧೭೫೯ (೨೧೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಗೆ ಬರುವ ವಾರ್ಡ್ ನಂ. ೧೪೯ಕ್ಕೆ ಹಲವಾರು ವರ್ಷಗಳಿಂದ ಆ ಭಾಗದ ನೇಕಾರರಿಂದ ಶ್ರೀ ದೇವರದಾಸಿಮಯ್ಯನವರ ಹೆಸರು ಇಡಲು ಬೇಡಿಕೆ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಲವಾರು ವರ್ಷಗಳಿಂದ ಆ ಭಾಗದಲ್ಲಿ ವಾಸ ಮಾಡುತ್ತಿರುವ ನೇಕಾರರ ಬೇಡಿಕೆ ತಿರಸ್ಕರಿಸಲು ಕಾರಣವೇನು ;

(ಇ) ಇವರ ಬೇಡಿಕೆಗೆ ಕೂಡಲೇ ಸ್ಪಂದಿಸಿ ಮರುನಾಮಕರಣ ಮಾಡಿ ನೇಕಾರರ ಕನಸು ನನಸು ಮಾಡಲಾಗುವುದೆ ?



## ತುಮಕೂರು ಜಿಲ್ಲೆಯಲ್ಲಿ ಬೃಹತ್ ಕೈಗಾರಿಕಾ ವಸಾಹತು ಯೋಜನೆ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮ ನಿರ್ದೇಶನ) :–**

೧೭೬೦ (೨೧೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯಲ್ಲಿ ಸಾವಿರಾರು ನಿರುದ್ಯೋಗಿಗಳಿಗೆ ಉದ್ಯೋಗ ಕಲ್ಪಿಸಬಹುದಾದಂತಹ ಮಹತ್ವದ ಯೋಜನೆಯಾದ ಬೃಹತ್ ಕೈಗಾರಿಕಾ ವಸಾಹತು ಯೋಜನೆಗೆ ಚಾಲನೆ ನೀಡಲಾಗಿದೆಯೇ ;

(ಆ) ಹಾಗಿದ್ದಲ್ಲಿ ಯಾವ ಭಾಗದಲ್ಲಿ ಎಷ್ಟು ಎಕರೆ ಭೂ ಪ್ರದೇಶವನ್ನು ಎಲ್ಲಿ ಕಾಯ್ದಿರಿಸಲಾಗಿದೆ ; (ವಿವರ ನೀಡುವುದು)

(ಇ) ಈ ಯೋಜನೆ ಯಾವುದು ಯಾವಾಗ ಮಂಜೂರಾಗಿದೆ ? (ವಿವರ ನೀಡುವುದು)

## ರಾಯಚೂರು ಜಿಲ್ಲೆಗೆ ಮಂಜೂರಾಗಿರುವ ಅನುದಾನದ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೬೧ (೨೧೭೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ನೇ ಸಾಲಿನಲ್ಲಿ ಮುಜರಾಯಿ ಇಲಾಖೆಗೆ ಒದಗಿಸಿರುವ ಅನುದಾನ ಎಷ್ಟು ;

(ಆ) ೨೦೧೪–೧೫ನೇ ಸಾಲಿನಲ್ಲಿ ಮುಜರಾಯಿ ಇಲಾಖೆಯಿಂದ ರಾಯಚೂರು ಜಿಲ್ಲೆಯ ವಿವಿಧ ದೇವಸ್ಥಾನಗಳಿಗೆ ಮಂಜೂರಾಗಿರುವ ಅನುದಾನವೆಷ್ಟು ?

## ಶಾಲಾ ಕಾಲೇಜುಗಳ ಹಾಗೂ ದೇವಸ್ಥಾನಗಳ ಪಕ್ಕದಲ್ಲಿ ಮದ್ಯದಂಗಡಿಗಳು

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :–**

೧೭೫೬ (೨೧೬೦) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಅಬಕಾರಿ ಕಾನೂನಿನನ್ವಯ ಶಾಲೆ, ದೇವಸ್ಥಾನಗಳು ಮತ್ತು ಮದ್ಯದಂಗಡಿಗಳ ಮಧ್ಯೆ ಇರುವ ಅಂತರವೆಷ್ಟು; ಈ ಮಾನದಂಡಕ್ಕಿರುವ ನಿಬಂಧನೆಗಳ ಪ್ರತಿ ಒದಗಿಸುವುದು;

(ಆ) ಈ ಕಾನೂನನ್ನು ರಾಜ್ಯದ ಎಲ್ಲಾ ಕಡೆ ಪಾಲಿಸಲಾಗುತ್ತಿದೆಯೇ;

(ಇ) ಹಾಗಿದ್ದಲ್ಲಿ, ಕಾನೂನು ಉಲ್ಲಂಘನೆ ಮಾಡಿದ್ದರೆ ಇವುಗಳನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ತುರುವೇಕೆರೆ ತಾಲ್ಲೂಕು, ಮುನಿಯೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಹತ್ತಿಕುಳ್ಳಪಾಳ್ಯದಲ್ಲಿ ದೇವಸ್ಥಾನಕ್ಕೆ ಕೇವಲ ೧೦ ಮೀಟರ್ ದೂರದಲ್ಲಿ ಮದ್ಯದ ಅಂಗಡಿ ತೆರೆಯಲು ಅನುಮತಿ ನೀಡಿರುವುದು ನಿಜವೇ;

(ಉ) ಹಾಗಿದ್ದಲ್ಲಿ ಗ್ರಾಮದ ಜನರು ವಿರೋಧ ಮಾಡಿದ್ದರೂ ಅಂಗಡಿ ಬದಲಾಯಿಸದಿರಲು ಕಾರಣವೇನು; ಕಾನೂನಿನನ್ವಯ ಅಂಗಡಿ ಮುಚ್ಚಿಸದೇ ಇರುವ ಅಧಿಕಾರಿಗಳ ಮೇಲೆ ಕ್ರಮ ತೆಗೆದುಕೊಳ್ಳಲಾಗುವುದೇ ?



## ಪೊಲೀಸ್ ಠಾಣೆಗಳಲ್ಲಿರುವ ವಾಹನಗಳ ಸ್ಥಿತಿಗತಿ ಕುರಿತು.

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :–**

೧೭೫೭ (೨೧೬೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತುಮಕೂರು ಜಿಲ್ಲೆಯಲ್ಲಿ ಪೊಲೀಸ್ ಅಧಿಕಾರಿಗಳಿಗೆ ವಾಹನದ ಸಮಸ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ತುಮಕೂರು ಜಿಲ್ಲೆಯಲ್ಲಿ ವಾಹನ ಒದಗಿಸಿರುವ ಮತ್ತು ಒದಗಿಸದೆ ಇರುವ ಹಾಗೂ ಹಳೆ ವಾಹನಗಳ ಬಳಕೆ ಮಾಡದೇ ಇರುವ ಪೊಲೀಸ್ ಠಾಣೆ ಹಾಗೂ ಸಿಬ್ಬಂದಿಗಳ ವಿವರ ನೀಡುವುದು;

(ಇ) ವಾಹನ ಒದಗಿಸುವುದಕ್ಕೆ ಅವುಗಳ ನಿರ್ವಹಣೆಗೆ ಇರುವಂತಹ ನಿಯಮಾವಳಿಗಳು ಹಾಗೂ ಮಾನದಂಡಗಳೇನು;

(ಈ) ಕೂಡಲೇ ಹೊಸ ವಾಹನ ಖರೀದಿಸಿ ಒದಗಿಸಲಾಗುವುದೇ ?

## ತಿಪಟೂರಿನಲ್ಲಿ ಶ್ರೀ ದೇವರ ದಾಸಿಮಯ್ಯ ಪ್ರತಿಮೆ ಅನಾವರಣ ಮಾಡುವ ಬಗ್ಗೆ

**ಶ್ರೀ ಎಂ.ಡಿ. ಲಕ್ಷ್ಮೀನಾರಾಯಣ (ಅಣ್ಣಯ್ಯ) (ನಾಮನಿರ್ದೇಶನ) :–**

೧೭೫೮ (೨೧೫೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ತಿಪಟೂರು ನಗರಸಭೆ ವ್ಯಾಪ್ತಿಯಲ್ಲಿ ಹೆಚ್ಚಿನ ನೇಕಾರರ ಸಮಾಜ (ದೇವಾಂಗ) ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

## ರಸ್ತೆ ಅಪಘಾತ ತಡೆಗಟ್ಟಲು ಕೈಗೊಂಡ ಕ್ರಮಗಳ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೫೪ (೨೧೫೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೫ ವರ್ಷಗಳಲ್ಲಿ ನಡೆದ ರಸ್ತೆ ಅಪಘಾತಗಳ ಸಂಖ್ಯೆ ಎಷ್ಟು; (ವರ್ಷವಾರು, ಜಿಲ್ಲಾವಾರು ವಿವರ ನೀಡುವುದು)

(ಆ) ವಿವಿಧ ರಸ್ತೆ ಅಪಘಾತದಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು; ಗಾಯಗೊಂಡವರ ಸಂಖ್ಯೆ ಎಷ್ಟು; (ಜಿಲ್ಲಾವಾರು, ವರ್ಷವಾರು ಕಳೆದ ೫ ವರ್ಷದ ವಿವರ ನೀಡುವುದು)

(ಇ) ಕಳೆದ ೫ ವರ್ಷಗಳಲ್ಲಿ ವಾಹನ–ರಸ್ತೆ ನಿಯಮ ಉಲ್ಲಂಘನೆ ಪ್ರಕರಣಗಳ ಸಂಖ್ಯೆ ಎಷ್ಟು; (ವರ್ಷವಾರು, ಪ್ರಕರಣದ ವಿಧವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ರಸ್ತೆ–ವಾಹನ ಅಪಘಾತಗಳ ಹೆಚ್ಚಳಕ್ಕೆ ಕಾರಣಗಳೇನು; (ವಿವರ ನೀಡುವುದು)

(ಉ) ರಸ್ತೆ ಅಪಘಾತವೂ ಸೇರಿದಂತೆ, ರಸ್ತೆ ನಿಯಮ ಉಲ್ಲಂಘನೆ ಪ್ರಕರಣಗಳನ್ನು ತಡೆಯಲು ಅಥವಾ ಕಡಿಮೆ ಮಾಡಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು? (ಸಂಪೂರ್ಣ ವಿವರ ನೀಡುವುದು)



## I.F.S. ಅಧಿಕಾರಿಗಳ ವಿವರದ ಬಗ್ಗೆ

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೫೫ (೨೧೫೫) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸರ್ಕಾರದಲ್ಲಿರುವ ಅಧಿಕಾರಿಗಳ ಸಂಖ್ಯೆಯೆಷ್ಟು;

(ಆ) ಅರಣ್ಯ ಇಲಾಖೆಯಲ್ಲಿ ಕೆಲಸಮಾಡುತ್ತಿರುವ I.F.S. ಅಧಿಕಾರಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಇ) I.F.S. ಅಧಿಕಾರಿಗಳು ಯಾವ ಯಾವ ಇಲಾಖೆಗಳಲ್ಲಿ / ನಿಗಮ/ ಮಂಡಳಿ/ ಇತರೆ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುತ್ತಾರೆ; (ವಿವರ ನೀಡುವುದು)

(ಈ) ಅರಣ್ಯ ಇಲಾಖೆಯಲ್ಲಿ ಕೆಲಸವಿಲ್ಲದ ಇವರಿಗೆ ಇತರೆ ಇಲಾಖೆಯಲ್ಲಿ ಹೋಗಿ ಭ್ರಷ್ಟಾಚಾರ ಮಾಡಲು ಸರ್ಕಾರ ಅವಕಾಶ ನೀಡಿದೆಯೇ ತಿಳಿಸುವುದು;

(ಉ) ಈ I.F.S. ಅಧಿಕಾರಿಗಳ ಸೇವೆ ಅರಣ್ಯ ಇಲಾಖೆಗೆ ಬಿಟ್ಟು ಇತರೆ ಇಲಾಖೆಗಳಿಗೆ/ನಿಗಮ/ಮಂಡಳಿ/ಸರ್ಕಾರಿ ಕಾರ್ಖಾನೆಗಳಿಗೆ ಬಳಸಿಕೊಳ್ಳುತ್ತಿರುವ ಔಚಿತ್ಯವೇನಾದರೂ ಇದೆಯೇ; (ವಿವರ ನೀಡುವುದು)

(ಊ) ಹೆಚ್ಚುವರಿಯಾಗಿರುವ I.F.S. ಅಧಿಕಾರಿಗಳನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸಲು ಸರ್ಕಾರ ಏನಾದರೂ ಕ್ರಮ ತೆಗೆದುಕೊಳ್ಳುವುದೆ? (ವಿವರ ನೀಡುವುದು)

## ಗ್ರಾನೈಟ್ ಕ್ವಾರೆಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೭೫೨ (೨೧೫೧) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೫ ವರ್ಷಗಳಲ್ಲಿ ಎಷ್ಟು ಗ್ರಾನೈಟ್ ಕ್ವಾರೆಗಳಿಗೆ ಲೈಸನ್ಸ್ ನೀಡಲಾಗಿದೆ;

(ಆ) ಬಾಗಲಕೋಟೆ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿ ಸುಮಾರು ೩೫೦ ರಿಂದ ೪೦೦ ಸಣ್ಣ ಗ್ರಾನೈಟ್ ಕೈಗಾರಿಕೆಗಳಿದ್ದು, ಈ ಕೈಗಾರಿಕೆಗಳಿಗೆ ಅವಶ್ಯಕ ಕಚ್ಚಾ ಸಾಮಾಗ್ರಿ ಪೂರೈಕೆಯಾಗದೇ ಒಂದೊಂದಾಗಿ ಸ್ಥಗಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಈ ಕೈಗಾರಿಕೆಗೆ ಸರಬರಾಜಾಗುವ ಕಚ್ಚಾ ಸಾಮಾಗ್ರಿಗೆ ವಿಧಿಸುವ ರಾಜಸ್ವವು ವಿದೇಶಗಳಿಗೆ ರಫ್ತು ಮಾಡುವವರಿಗೂ ಹಾಗೂ ಸ್ಥಳೀಯವಾಗಿ ಮಾರಾಟ ಮಾಡುವವರಿಗೂ ಒಂದೇ ರೀತಿಯಾಗಿರುವುದರಿಂದ ಈ ಕ್ವಾರಿಗಳಿಗೆ ಬೇರೆ ರಾಜ್ಯದ ಕೈಗಾರಿಕೆಗಳೊಂದಿಗೆ ಸ್ವರ್ಧಿಸಲು ಆಗದೆ ಇರುವುದರಿಂದ ಈ ಕ್ವಾರಿಗಳು ಮುಚ್ಚುವ ಸ್ಥಿತಿಯಲ್ಲಿದ್ದು ಸುಮಾರು ೨೦–೨೫ ಸಾವಿರ ನೇರ ಅವಲಂಬಿತ ಜನರು ಉದ್ಯೋಗವಿಲ್ಲದೇ ಬೀದಿಗೆ ಬರುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಇದನ್ನು ತಪ್ಪಿಸಲು ಸರ್ಕಾರ ತೆಗೆದುಕೊಳ್ಳುವ ಕ್ರಮವೇನು?



## ಸರ್ಕಾರಿ ನೌಕರರಿಗೆ ವಸತಿಗೃಹ ಒದಗಿಸುವುದು ಮತ್ತು ಹೆಚ್‌ಆರ್‌ಎ ಹೆಚ್ಚಳ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೫೩ (೨೧೫೨) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಗ್ರೂಫ್ ಎ,ಬಿ,ಸಿ,ಡಿ. ವರ್ಗದ ಸರ್ಕಾರಿ ನೌಕರರ ಸಂಖ್ಯೆ ಎಷ್ಟು; (ಜಿಲ್ಲಾವಾರು, ಇಲಾಖಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಲಭ್ಯವಿರುವ ವಸತಿಗೃಹಗಳೆಷ್ಟು; (ಜಿಲ್ಲಾವಾರು, ಇಲಾಖಾವಾರು ಮಾಹಿತಿ ನೀಡುವುದು)

(ಇ) ಸರ್ಕಾರಿ ನೌಕರರಿಗೆ ಅಗತ್ಯವಿರುವಷ್ಟು ವಸತಿಗೃಹಗಳು ಲಭ್ಯವಿಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಈ) ಸರ್ಕಾರಿ ನೌಕರರು ತಮ್ಮ ಕೇಂದ್ರಸ್ಥಾನದಲ್ಲಿಯೇ ವಾಸವಿದ್ದು, ಜನರಿಗೆ ಲಭ್ಯವಾಗಲು ಅನುವಾಗುವಂತೆ ವಸತಿಗೃಹಗಳನ್ನು ಒದಗಿಸಲು ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ;

(ಉ) ಪ್ರಸಕ್ತ ನೀಡುತ್ತಿರುವ ಹೆಚ್.ಆರ್.ಎ ಅತೀ ಕಡಿಮೆಯಿದ್ದು, ಅದರಲ್ಲಿ ಬಾಡಿಗೆ ವಸತಿ ಪಡೆಯುವುದು ಕಷ್ಟಕರವಾಗಿರುವ ಬಗ್ಗೆ ಸರ್ಕಾರದ ನಿಲುವೇನು; ಹೆಚ್‌ಆರ್‌ಎ ಹೆಚ್ಚಳಕ್ಕೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ?

## ಹೋಟೆಲ್‌ಗಳಲ್ಲಿ ಅಕ್ರಮವಾಗಿ ಮದ್ಯ ಮಾರಾಟದ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೭೫೦ (೨೧೪೯) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಉಡುಪಿ ಜಿಲ್ಲೆಯ ಕಾರ್ಕಳ ತಾಲ್ಲೂಕಿನಲ್ಲಿ ಬಾರ್ ಮತ್ತು ವೈನ್ ಶಾಪ್‌ಗಳಲ್ಲಿ ಮಾರಾಟವಾಗುತ್ತಿರುವ ಮದ್ಯ ಈಗ ತಾಲ್ಲೂಕಿನಾದ್ಯಂತ ಮೀನಿನ ಊಟದ ಹೋಟೆಲ್‌ಗಳಲ್ಲಿ ಅಕ್ರಮವಾಗಿ ಮಾರಾಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಭಾಗದಲ್ಲಿ ಇತ್ತೀಚೆಗೆ ಗೋವಾದಿಂದ ಹೆಚ್ಚಿನ ಪ್ರಮಾಣದ ಮದ್ಯವನ್ನು ಅಕ್ರಮವಾಗಿ ತಂದು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ;

(ಇ) ಗ್ರಾಮೀಣ ಪ್ರದೇಶದ ಈ ಭಾಗದಲ್ಲಿ ಮೀನು ಮತ್ತು ಇತರೆ ಹೋಟೆಲ್‌ಗಳಲ್ಲಿ ಮದ್ಯವ್ಯಸನಿಗಳು ಹೆಚ್ಚಿನ ಬೆಲೆ ತೆತ್ತು ಮದ್ಯಪಾನ ಮಾಡುತ್ತಿದ್ದು, ಇದರಿಂದ ಅವರು ದುಡಿದ ಹಣದಲ್ಲಿ ಹೆಚ್ಚಿನ ಮೊತ್ತ ಮದ್ಯಕ್ಕೆ ನೀಡುತ್ತಿರುವ ಸ್ಥಿತಿ ನಿರ್ಮಾಣವಾಗಿದ್ದು, ಇದನ್ನು ತಪ್ಪಿಸಲು ಮತ್ತು ಈ ತಾಲ್ಲೂಕಿನಲ್ಲಿ ನಡೆಯುತ್ತಿರುವ ಅಕ್ರಮ ಮದ್ಯ ಮಾರಾಟ ತಡೆಯಲು ಸರ್ಕಾರ ಏನು ಕ್ರಮ ಕೈಗೊಂಡಿದೆ ? (ವಿವರಿಸುವುದು)



## ಕಾರಾಗೃಹದಲ್ಲಿ ಖೈದಿಗಳಿಂದ ಮೊಬೈಲ್ ಪೋನ್ ಬಳಕೆಯ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೭೫೧ (೨೧೫೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಲ್ಲಾ ಜಿಲ್ಲಾ ಕಾರಾಗೃಹಗಳಲ್ಲಿ ಮತ್ತು ಅದರಲ್ಲೂ ವಿಶೇಷವಾಗಿ ಬೆಂಗಳೂರಿನ ಪರಪ್ಪನ ಅಗ್ರಹಾರದ ಕಾರಾಗೃಹದಲ್ಲಿ ಖೈದಿಗಳಿಂದ ಮೊಬೈಲ್ ಪೋನ್ ಬಳಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಈ ಕಾರಾಗೃಹದಲ್ಲಿ ಮೊಬೈಲ್ ಪೋನ್ ಬಳಕೆ ನಿಷೇಧವಿದ್ದರೂ ಖೈದಿಗಳು ಮೊಬೈಲ್‌ಗಳನ್ನು ಒಳಗಡೆ ತೆಗೆದುಕೊಂಡು ಹೋಗಲು ಅವಕಾಶವಿದೆಯೇ; ಕಾರಾಗೃಹದ ಭದ್ರತಾ ಸಿಬ್ಬಂದಿಯವರು ಖೈದಿಗಳು ಪ್ರವೇಶ ಮಾಡುವಾಗ ಸರಿಯಾಗಿ ತಪಾಸಣೆ ಮಾಡುವುದಿಲ್ಲವೇ;

(ಇ) ಮೇಲಾಧಿಕಾರಿಗಳು ಈ ಕಾರಾಗೃಹಕ್ಕೆ ಭೇಟಿ ಮಾಡಿದ ಸಂದರ್ಭದಲ್ಲಿ ಮೊಬೈಲ್ ಪೋನ್‌ಗಳನ್ನು ಮತ್ತು ಹಲವಾರು ಸಿಮ್ ಕಾರ್ಡ್‌ಗಳನ್ನು ಖೈದಿಗಳಿಂದ ವಶಪಡಿಸಿಕೊಂಡಿದ್ದು, ಮೊಬೈಲ್ ಪೋನ್ ಬಳಕೆಯನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು?

## ಪಶುಸಂಗೋಪನಾ ಇಲಾಖೆಯಲ್ಲಿ ತುರ್ತುಚಿಕಿತ್ಸಾ ಕ್ರಮಗಳ ಕುರಿತು

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೭೪೭ (೨೧೪೬) ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಗೋವುಗಳಿಗೆ (ದನಕರು) ತುರ್ತು ಸಂದರ್ಭಗಳಲ್ಲಿ ಚಿಕಿತ್ಸೆ ನೀಡಲು ಆರೋಗ್ಯ ಇಲಾಖೆಯ ೧೦೮ ವಾಹನ ಮಾದರಿಯಲ್ಲಿ ಪಶುಸಂಗೋಪನೆ ಇಲಾಖೆ "ತುರ್ತು ವಾಹನ" ವ್ಯವಸ್ಥೆ ಮಾಡುವ ಪ್ರಸ್ತಾವನೆ ಯಾವ ಹಂತದಲ್ಲಿದೆ;

(ಆ) ಪ್ರಾಯೋಗಿಕವಾಗಿ ಕೆಲವು ಜಿಲ್ಲೆಗಳಲ್ಲಿ ಈ ಯೋಜನೆಯನ್ನು ಜಾರಿ ಮಾಡಿ, ನಂತರ ಅದರ ಯಶಸ್ಸನ್ನು ನೋಡಿಕೊಂಡು ಇಡೀ ರಾಜ್ಯಕ್ಕೆ ಜಾರಿ ಮಾಡುವ ಯೋಜನೆ ಸರ್ಕಾರದ ಮುಂದೆ ಇದೆಯೇ? (ವಿವರ ನೀಡುವುದು)

## ಬೆಂಗಳೂರಿನ ಪರಪ್ಪನ ಅಗ್ರಹಾರದಲ್ಲಿರುವ ಕೇಂದ್ರ ಕಾರಾಗೃಹದಲ್ಲಿ ಖೈದಿಗಳ ಭದ್ರತೆಯ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೭೪೮ (೨೧೪೭) ಮಾನ್ಯ ಗೃಹ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರಿನ ಪರಪ್ಪನ ಅಗ್ರಹಾರದಲ್ಲಿ ಹಾಲಿ ಇರುವ ಖೈದಿಗಳ ಸಂಖ್ಯೆ ಎಷ್ಟು; ಈ ಕೇಂದ್ರ ಕಾರಾಗೃಹದಲ್ಲಿ ಎಷ್ಟು ಖೈದಿಗಳನ್ನು ಇಡಲು ಅವಕಾಶವಿದೆ;



(ಆ) ಈ ಕಾರಾಗೃಹದಲ್ಲಿ ಇತ್ತೀಚೆಗೆ ಖೈದಿಗಳು ಒಂದಲ್ಲ ಒಂದು ಪ್ರಕರಣದಲ್ಲಿ ಪರಾರಿಯಾಗುತ್ತಿದ್ದು, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಭದ್ರತಾ ಕ್ರಮಗಳೇನು;

(ಇ) ಈ ಕಾರಾಗೃಹದ ಭದ್ರತೆಗಾಗಿ ಮಂಜೂರಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಹಾಗೂ ಇದರಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು?

## ಕರ್ನಾಟಕ ಸಾಬೂನು ಕಾರ್ಖಾನೆಯ ಉತ್ಪನ್ನಗಳ ಬಗ್ಗೆ

**ಕ್ಯಾಪ್ಟನ್ ಗಣೇಶ್ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ) :–**

೧೭೪೯ (೨೧೪೮) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಸಾಬೂನು ಕಾರ್ಖಾನೆಯು ಉತ್ಪಾದಿಸುವ ವಿವಿಧ ಉತ್ಪನ್ನಗಳು ಯಾವುವು; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳ ಅವಧಿಯಲ್ಲಿ ಈ ಸಂಸ್ಥೆಯ ಉತ್ಪಾದನೆ, ಮಾರಾಟ ಮತ್ತು ಲಾಭ ನಷ್ಟದ ಮಾಹಿತಿ ಒದಗಿಸುವುದು;

(ಇ) ಈ ಸಂಸ್ಥೆಯು ಉತ್ಪಾದಿಸುವ ಸಾಬೂನುಗಳಿಗೆ ದೇಶವ್ಯಾಪ್ತಿ ಬೇಡಿಕೆ ಇದ್ದು, ಇದರ ಉತ್ಪಾದನೆ ಸಮಗ್ರವಾಗಿ ಹೆಚ್ಚಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು;

(ಈ) ಈ ಸಂಸ್ಥೆಯ ಜನಪ್ರಿಯ ಬ್ರಾಂಡ್ ಆದ ಮೈಸೂರು ಸ್ಯಾಂಡಲ್ ಸೋಪಿಗೆ ಬೇಕಾಗುವ ಶ್ರೀಗಂಧದ ಎಣ್ಣೆಯನ್ನು ಎಲ್ಲಿಂದ ಖರೀದಿಸಲಾಗುವುದು?

## ಅಮೃತ್ ಮಹಲ್ ತಳಿಯ ಅಭಿವೃದ್ಧಿ ಕುರಿತು

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೭೪೪ (೨೧೬೫) ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಅಮೃತ್ ಮಹಲ್ ತಳಿಯ ರಾಸುಗಳ ಸಂತತಿ ಅಳಿವಿನ ಅಂಚಿಗೆ ತಲುಪಿರುವುದು ನಿಜವಲ್ಲವೆ; ರಾಜ್ಯದಲ್ಲಿ ಈ ತಳಿಯ ರಾಸುಗಳು ಎಷ್ಟಿವೆ;

(ಆ) ರಾಜ್ಯದಲ್ಲಿ ಅಮೃತ್ ಮಹಲ್ ತಳಿ ರಾಸುಗಳ ಅಭಿವೃದ್ಧಿಯ ಕೇಂದ್ರಗಳೆಷ್ಟಿರುತ್ತವೆ; ಅವುಗಳ ಪಾಲನೆಗೆ ಸರ್ಕಾರಿ ಹುಲ್ಲುಗಾವಲು ಮೀಸಲು ಜಮೀನು ಎಷ್ಟು;

(ಇ) ರಾಜ್ಯದಲ್ಲಿ ಅಮೃತ್ ಮಹಲ್ ತಳಿ ರಾಸುಗಳ ಅಭಿವೃದ್ಧಿಗೆ ಕೈಗೊಂಡಿರುವ ಕ್ರಮಗಳೇನು?

## ಬೆಂಗಳೂರು ನಗರದಲ್ಲಿ ಅಕ್ರಮವಾಗಿ ನಡೆಯುತ್ತಿರುವ ವಿಡಿಯೋ ಗೇಮ್ಸ್ ಕುರಿತು

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೭೪೫ (೨೧೬೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಅಕ್ರಮವಾಗಿ ನಡೆಯುತ್ತಿರುವ ವಿಡಿಯೋ ಗೇಮ್ಸ್ ಹಾಗೂ ಇನ್ನಿತರೆ ಚಟುವಟಿಕೆಗಳ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆಯೇ; ಇದ್ದರೆ ವಿವರ ನೀಡುವುದು;



(ಆ) ಬೆಂಗಳೂರು ನಗರದಲ್ಲಿ ಇಂತಹ ವಿಡಿಯೋ ಗೇಮ್ಸ್ ಕೇಂದ್ರಗಳು ಎಷ್ಟಿವೆ; ಇದರೊಂದಿಗೆ ಪೊಲೀಸ್ ಅಧಿಕಾರಿಗಳು ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಇಂತಹ ಅಕ್ರಮ ಕೇಂದ್ರಗಳ ಕಾರ್ಯಚಟುವಟಿಕೆಗಳನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಪಶುವೈದ್ಯಕೀಯ ಆಸ್ಪತ್ರೆ ಕುರಿತು

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೭೪೬ (೨೧೬೬) ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೋಲಾರ–ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿ ಹಾಲಿ ಇರುವ ಪಶು ವೈದ್ಯಕೀಯ ಆಸ್ಪತ್ರೆಗಳ ಸಂಖ್ಯೆ ಎಷ್ಟು;

(ಆ) ಸ್ವಂತ ಕಟ್ಟಡಗಳಲ್ಲಿ ನಡೆಯುತ್ತಿರುವ ಆಸ್ಪತ್ರೆಗಳು ಎಷ್ಟು;

(ಇ) ಕಳೆದ ಮೂರು ವರ್ಷಗಳಿಂದ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಇಲಾಖೆಯಲ್ಲಿ ಬಿಡುಗಡೆಯಾದ ಮೊತ್ತವೆಷ್ಟು ?

(ಇ) ಹಾಗಿದ್ದಲ್ಲಿ, ಅದರ ನೀಲಿ ನಕ್ಷೆಯನ್ನು ಸಿದ್ಧಪಡಿಸಲಾಗಿದೆಯೇ; ಈ ಕಾಮಗಾರಿಯನ್ನು ಕೈಗೊಳ್ಳಲು ತಗಲುವ ಅಂದಾಜು ವೆಚ್ಚ ಎಷ್ಟು; ಅನುದಾನ ಬಿಡುಗಡೆ ಮಾಡಲಾಗಿದೆಯೇ;

(ಈ) ಈ ದೇವಸ್ಥಾನಗಳಿಗೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಯಾವ ಕಾಲ ಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು?

## ನೌಕರರ ಜ್ಯೇಷ್ಠತಾ ಪಟ್ಟಿ ತಯಾರಿಸುವಲ್ಲಿ ಅಕ್ರಮವಾಗುತ್ತಿರುವ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೪೨ (೨೧೪೫) ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಇಲಾಖೆಯ "ಮುಖ್ಯಸ್ಥರಗಳು" ನೌಕರರ ಜ್ಯೇಷ್ಠತಾ ಪಟ್ಟಿಯನ್ನು ಅಂತರ್ಜಾಲ ತಾಣದಲ್ಲಿ ಪ್ರಕಟಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಬಂದಿದ್ದರೆ ತೆಗೆದುಕೊಂಡಿರುವ ಕ್ರಮಗಳೇನು;

(ಆ) ಎಲ್ಲಾ ಇಲಾಖೆಯ "ಮುಖ್ಯಸ್ಥರಗಳಿಗೆ" ಜ್ಯೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಆದೇಶ ನೀಡಲಾಗಿದೆಯೆ; ಗ್ರೂಪ್ ಎ.ಬಿ.ಸಿ.ಡಿ ನೌಕರರ ಜ್ಯೇಷ್ಠತಾ ಪಟ್ಟಿಯನ್ನು ವರ್ಷವಾರು ಇಲಾಖೆಯ ಅಂತರ್ಜಾಲದಲ್ಲಿ ಪ್ರಕಟಿಸಲು ಇರುವ ತೊಂದರೆಗಳೇನು; (ಸಂಪೂರ್ಣ ವಿವರ ನೀಡುವುದು)



(ಇ) ಜ್ಯೇಷ್ಠತಾ ಪಟ್ಟಿ ನಿಗಧಿಪಡಿಸುವಲ್ಲಿ " ಇಲಾಖೆಯ ಮುಖ್ಯಸ್ಥರಗಳ" ಅಕ್ರಮ ಎಸಗಿ ಗ್ರೂಪ್ ಸಿ.ಡಿ ನೌಕರರಿಗೆ ತೊಂದರೆ ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ ಸರ್ಕಾರದಿಂದ ತೆಗೆದುಕೊಂಡಿರುವ ಕ್ರಮಗಳೇನು ? (ಸಂಪೂರ್ಣ ವಿವರ ನೀಡುವುದು)

## ಜಾನುವಾರುಗಳಿಗೆ ಚಿಕಿತ್ಸಾಲಯ ಕುರಿತು

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೪೩ (೨೧೫೬) ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಹೈನುಗಾರಿಕೆ ಲಾಭದಾಯಕ ಕಸುಬಾಗಿರುವುದರಿಂದ ಜಾನುವಾರುಗಳ ಸಂಖ್ಯೆ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿದ್ದು, ಜಾನುವಾರುಗಳಿಗೆ ಸಮರ್ಪಕ ಸೇವೆ ಒದಗಿಸಲು ಇಲಾಖೆ ಸಮರ್ಥವಾಗಿದೆಯೇ;

(ಆ) ಇಲ್ಲದೆ ಇದ್ದರೆ, ಹೊಸ ಪಶು ಆಸ್ಪತ್ರೆ, ಚಿಕಿತ್ಸಾಲಯ ಪ್ರಾರಂಭಿಸಲು ವೈದ್ಯರು ಮತ್ತು ಸಿಬ್ಬಂದಿಗಳನ್ನು ನೇಮಕಾತಿ ಮಾಡಿ ಚುಚ್ಚು ಮದ್ದು ಮತ್ತು ಔಷಧಿಗಳ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡ ಕ್ರಮಗಳೇನು?

## ಕೈಗಾರಿಕೆ ಅಭಿವೃದ್ಧಿಯಲ್ಲಿನ ಪ್ರಾದೇಶಿಕ ಅಸಮತೋಲವನ್ನು ಸರಿದೂಗಿಸುವ ಬಗ್ಗೆ.

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೩೯ (೨೧೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೪–೧೫ ರಲ್ಲಿದ್ದಂತೆ ದಕ್ಷಿಣ ಕರ್ನಾಟಕದಲ್ಲಿ ಮತ್ತು ಉತ್ತರ ಕರ್ನಾಟಕದಲ್ಲಿ ಸ್ಥಾಪನೆಯಾಗಿರುವ ಮಧ್ಯಮ ಮತ್ತು ಭಾರಿ ಕೈಗಾರಿಕೆಗಳ ಸಂಖ್ಯೆ ಎಷ್ಟು ;

(ಆ) ವಿವಿಧ ಕೈಗಾರಿಕಾ ಅಭಿವೃದ್ಧಿ ಸೂಚಕಗಳ ಮೌಲ್ಯ ನಿರ್ಧರಿತ ಸರಾಸರಿ ಎಷ್ಟು ; ದಕ್ಷಿಣ ಮತ್ತು ಉತ್ತರ ಕರ್ನಾಟಕದ ಶೇಕಡವಾರು ಸರಾಸರಿ ವಿವರಗಳನ್ನು ನೀಡುವುದು ;

(ಇ) ಕಳೆದ ಹತ್ತು ವರ್ಷಗಳಲ್ಲಿ ಕೈಗಾರಿಕಾ ಪ್ರಾದೇಶಿಕ ಅಸಮಾನತೆಯನ್ನು ತೊಡೆದು ಹಾಕಲು ಸರ್ಕಾರವು ಕೈಗೊಂಡ ಕ್ರಮಗಳೇನು ?

## ಆರ್ಥಿಕವಾಗಿ ಹಿಂದುಳಿದವರಿಗೆ ನಿವೇಶನ/ಮನೆ ಕಾಯ್ದಿರಿಸುವ ಬಗ್ಗೆ.

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೪೦ (೨೧೩೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರ್ಥಿಕವಾಗಿ ಹಿಂದುಳಿದ ವರ್ಗದವರು ವಸತಿ ಸೌಲಭ್ಯದ ಸಮಸ್ಯೆಯನ್ನು ಎದುರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಹಾಗಿದ್ದಲ್ಲಿ, ಆರ್ಥಿಕವಾಗಿ ಹಿಂದುಳಿದ ವರ್ಗದವರಿಗಾಗಿ ವಸತಿ ಬಡಾವಣೆಗಳಲ್ಲಿ ನಿವೇಶನ ಅಥವಾ ಫ್ಲಾಟ್‌ಗಳು ಅಥವಾ ಮನೆಗಳನ್ನು ಮೀಸಲು ಇಡಲು ನಿಗಧಿಪಡಿಸಲಾಗುವುದೆ ?

## ಬೆಳಗಾವಿ ಜಿಲ್ಲೆಯ ಮಾಯಕ್ಕಾ ದೇವಸ್ಥಾನ ಮತ್ತು ಖೇಳೇಂಗಾವ ಬಸವೇಶ್ವರ ದೇವಸ್ಥಾನಗಳ ಸೌಲಭ್ಯಗಳ ಕುರಿತು

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೪೧ (೨೧೪೩) ಮಾನ್ಯ ಕಾನೂನು ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನ ಮಾಯಕ್ಕಾ ಚಿಂಚಲಿ ದೇವಸ್ಥಾನ ಹಾಗೂ ಬೆಳಗಾವಿ ಜಿಲ್ಲೆಯ ಅಥಣಿ ತಾಲ್ಲೂಕಿನ ಖೇಳೇಂಗಾವ ಬಸವೇಶ್ವರ ದೇವಸ್ಥಾನಗಳು ಅತ್ಯಂತ ಪ್ರಾಚೀನ ಮತ್ತು ಶಾಶ್ವತ ದೇವಸ್ಥಾನಗಳಾಗಿದ್ದು ಇಲ್ಲಿ ಮೂಲಭೂತ ಸೌಲಭ್ಯಗಳಿಲ್ಲದೆ ಇರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಅಲ್ಲಿ ಬರುವ ಭಕ್ತಾದಿಗಳಿಗೆ ಮತ್ತು ಪ್ರವಾಸಿಗರಿಗೆ ಅತಿಥಿ ಗೃಹಗಳನ್ನು ಶೌಚಾಲಯಗಳನ್ನು ಶುದ್ಧ ಕುಡಿಯುವ ನೀರಿನ ವ್ಯವಸ್ಥೆ ಮತ್ತು ಇನ್ನಿತರ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವ ವಿಚಾರ ಸರ್ಕಾರದ ಮುಂದೆ ಇದೆಯೆ;

(ಈ) ಸೇವಾ ನಿರತಾ ಪಿ.ಸಿ/ಹೆಡ್ ಕಾನ್ಸ್‌ಸ್ಟೇಬಲ್/ಎಎಸ್ಐ ರವರಿಗೆ (೨೦೦೨–೨೦೦೪) ರಲ್ಲಿ ನಡೆಸಿದಂತೆ ಪಿ.ಎಸ್.ಐ ಹುದ್ದೆಗೆ ವಿಶೇಷ ನೇಮಕಾತಿ ನಡೆಸದಿರಲು ಕಾರಣವೇನು ;

(ಉ) ೧೦ ವರ್ಷಕ್ಕೂ ಮೇಲ್ಪಟ್ಟು ಸೇವೆ ಸಲ್ಲಿಸಿ ಒಂದು ಮುಂಬಡ್ತಿಯೂ ಸಿಗದಿರುವ ಪದವೀಧರ ಪೊಲೀಸರ ಸಂಖ್ಯೆ ಎಷ್ಟು ?

## ದಕ್ಷಿಣ ಕನ್ನಡ ಜಿಲ್ಲೆಯ ಪೊಲೀಸ್ ಠಾಣೆಗಳಲ್ಲಿ ಪಾಸ್‌ಪೋರ್ಟ್‌ಗಾಗಿ ವೆರಿಫಿಕೇಷನ್ ಅರ್ಜಿಗಳ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೭೩೬ (೨೧೩೬) ಮಾನ್ಯ ಗೃಹ ಸಚಿವರು ಈ ವಿಷಯವನ್ನು ದಯವಿಟ್ಟು ತಿಳಿಸುವರೆ :–

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜನವರಿ ೨೦೧೪ ರಿಂದ ೨೦೧೫ ಮೇ ತಿಂಗಳಿನ ವರೆಗೆ ವಿವಿಧ ಠಾಣೆಗಳಲ್ಲಿ ಪಾಸ್‌ಪೋರ್ಟ್ ಪೊಲೀಸ್ ವೆರಿಫಿಕೇಷನ್‌ಗೆ (PCC) ಬಂದಿರುವ ಅರ್ಜಿಗಳೆಷ್ಟು ; ಇವುಗಳಲ್ಲಿ ನಿರಾಕರಿಸಿದ ಅರ್ಜಿಗಳೆಷ್ಟು ? (ವಿವರ ಒದಗಿಸುವುದು)

## ರಾಮನಗರ ಜಿಲ್ಲೆಯಲ್ಲಿ ಕಲ್ಲುಗಣಿಗಾರಿಕೆ ಮಂಜೂರಾತಿ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೩೭ (೨೧೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ ಜಿಲ್ಲೆಯಲ್ಲಿ ೨೦೧೩–೨೦೧೪, ೨೦೧೪–೨೦೧೫ನೇ ಸಾಲಿನಲ್ಲಿ ಕಲ್ಲುಗಣಿ ಗುತ್ತಿಗೆಗಾಗಿ ಎಷ್ಟು ಅರ್ಜಿಗಳು ಬಂದಿವೆ ;



(ಆ) ಎಷ್ಟು ಅರ್ಜಿದಾರರಿಗೆ ಮಂಜೂರಾತಿ ನೀಡಲಾಗಿದೆ ;

(ಇ) ಮಂಜೂರಾತಿ ನೀಡುವಲ್ಲಿ ಅರಣ್ಯ ಇಲಾಖೆಯ ಅಧಿಕಾರಿಗಳಿಂದ ವಿಳಂಬವಾಗುತ್ತಿದೆಯೇ ;

(ಈ) ಹಾಗಿದ್ದಲ್ಲಿ, ವಿಳಂಬ ಮಾಡುತ್ತಿರುವ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸದಿರಲು ಕಾರಣವೇನು ?

## ಬೆಳಗಾವಿ ನಗರದ ಅಭಿವೃದ್ಧಿ ಕುರಿತು.

**ಡಾ॥ ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೩೮ (೨೧೪೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ನಗರದ ಅಭಿವೃದ್ಧಿಗಾಗಿ ನಗರಾಭಿವೃದ್ಧಿ ಪ್ರಾಧಿಕಾರವು ಯಾವ ಯೋಜನೆಗಳನ್ನು ರೂಪಿಸಿದೆ ;

(ಆ) ಬೆಳಗಾವಿ ನಗರಾಭಿವೃದ್ಧಿ ಯೋಜನೆ (ಸಿಡಿಪಿ) ವ್ಯಾಪ್ತಿಗೆ ಹಲಗಾ– ಬಸ್ತವಾಡ ಕೊಂಡಸಕೊಪ್ಪ ಗ್ರಾಮಗಳನ್ನು ಸೇರ್ಪಡೆ ಮಾಡಲಾಗುವುದೇ ;

(ಇ) ಸುವರ್ಣ ವಿಧಾನಸೌಧದ ಸುತ್ತಮುತ್ತಲಿನ ಪ್ರದೇಶವನ್ನು ಅಭಿವೃದ್ಧಿಪಡಿಸಲು ಯಾವ ಯಾವ ಕ್ರಮಗಳನ್ನು ಕೈಗೊಳ್ಳಲಾಗುವುದು ?

ಕಾರಣಗಳೇನು ; ಈ ಮಾರುಕಟ್ಟೆಗಳಿಗೆ ಪ್ರಾರಂಭಿಕ ಅಂದಾಜು ಎಷ್ಟು ; ಪ್ರಸ್ತುತ ಈ ಯೋಜನೆಗಳ ವೆಚ್ಚ ಎಷ್ಟು ;

(ಆ) ಜಪ್ಪು ಮಾರುಕಟ್ಟೆಯ ಕಟ್ಟಡವನ್ನು ಅಸಮರ್ಪಕವಾಗಿ ಕಟ್ಟಲಾಗಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಬಿಜೈ ಶಾಲಾ ಆವರಣದ ರಸ್ತೆಯಲ್ಲಿ ಮೀನು ವ್ಯವಹಾರ ನಡೆಸುತ್ತಿದ್ದು, ಈ ಬಗ್ಗೆ ಇಲಾಖೆ ಕೈಗೊಂಡ ಕ್ರಮಗಳೇನು ;

(ಈ) ಮಂಗಳೂರು ಮಹಾನಗರದಲ್ಲಿ ಎಷ್ಟು ನೂತನ ಮಾರುಕಟ್ಟೆ ರಚಿಸಲು ಅಂದಾಜಿಸಲಾಗಿದೆ ; ಅದರ ಅಂದಾಜು ವೆಚ್ಚ ಎಷ್ಟು; ಮಾರುಕಟ್ಟೆ ನಿರ್ಮಿಸಲು ಎಷ್ಟು ಸಮಯವನ್ನು ನಿಗದಿ ಪಡಿಸಲಾಗಿದೆ ? (ವಿವರ ನೀಡುವುದು)

## ಮಂಗಳೂರು ನಗರದಲ್ಲಿ ಘನತ್ಯಾಜ್ಯ ವಿಲೇವಾರಿಗಳಿಗೆ ತಗಲುವ ವೆಚ್ಚದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೭೩೪ (೨೧೩೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ನಗರದಲ್ಲಿ ಘನತ್ಯಾಜ್ಯ ವಿಲೇವಾರಿಗೆ ಒಂದು ತಿಂಗಳಿಗೆ ತಗಲುವ ವೆಚ್ಚ ಎಷ್ಟು ; ನಗರದಲ್ಲಿ ವಾಸಿಸುವ ಕುಟುಂಬಗಳ ಸಂಖ್ಯೆ ಎಷ್ಟು ; ಒಂದು ಕುಟುಂಬಕ್ಕೆ ತಗಲುವ ವೆಚ್ಚ ಎಷ್ಟು ;



(ಆ) ಮಂಗಳೂರು ನಗರದಲ್ಲಿ ಘನತ್ಯಾಜ್ಯ ನಿರ್ವಹಣೆಗೆ ಪ್ರತಿ ಕುಟುಂಬದಿಂದ ಎಷ್ಟು ಹಣ ವಸೂಲಿ ಮಾಡಲಾಗುತ್ತದೆ ; ಸಂಗ್ರಹವಾದ ಮೊತ್ತ ಎಷ್ಟು ; ಘನತ್ಯಾಜ್ಯ ವಿಲೇವಾರಿಗೆ ಯಾವ ಕಂಪನಿಗೆ ವಹಿಸಿಕೊಡಲಾಗಿದೆ ; ಇದರ ವಿಲೇವಾರಿಗಾಗಿ ಎಷ್ಟು ಮಂದಿ ಕೆಲಸ ನಿರ್ವಹಿಸುತ್ತಿದ್ದಾರೆ ; (ವಿವರ ನೀಡುವುದು)

(ಇ) ಮಂಗಳೂರಿನಲ್ಲಿ ಘನ ತ್ಯಾಜ್ಯವನ್ನು ಸಂಸ್ಕರಣೆ ಮಾಡಿ ವಿಲೇವಾರಿ ಮಾಡಲು ಸರ್ಕಾರ ಕೈಗೊಂಡ ಕ್ರಮಗಳೇನು ? (ವಿವರ ನೀಡುವುದು)

## ಪೊಲೀಸ್ ಇಲಾಖೆಯಲ್ಲಿ ಪಿ.ಸಿ/ಹೆಡ್ ಕಾನ್ಸ್‌ಸ್ಟೇಬಲ್/ಎಎಸ್‌ಐ ಹುದ್ದೆಗಳ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೭೩೫ (೨೧೩೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೊಲೀಸ್ ಇಲಾಖೆಯಲ್ಲಿ ಪಿ.ಸಿ/ಹೆಡ್ ಕಾನ್ಸ್‌ಸ್ಟೇಬಲ್/ಎಎಸ್‌ಐ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪದವೀಧರ ಮತ್ತು ಸ್ನಾತಕೋತ್ತರ ಪದವೀಧರರ ಸಂಖ್ಯೆ ಎಷ್ಟು ;

(ಆ) ಇವರಲ್ಲಿ ೧೦ ವರ್ಷಕ್ಕೂ ಮೇಲ್ಪಟ್ಟು ಸೇವೆ ಸಲ್ಲಿಸಿದವರ ಸಂಖ್ಯೆ ಎಷ್ಟು ;

(ಇ) ಇಲಾಖೆಯಲ್ಲಿ ಪದವೀಧರರಿಗಾಗಿ ಯಾವುದಾದೂ ಸವಲತ್ತು ನೀಡಲಾಗಿದೆಯೇ; ಉದ್ಯೋಗದಲ್ಲಿ ವಿಶೇಷ ಸವಲತ್ತು ನೀಡಲಾಗಿದೆಯೇ ;

(ಆ) ರಾಜ್ಯದಲ್ಲಿ ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಬಕಾರಿ ಇಲಾಖಾ ಕಛೇರಿಗಳೆಷ್ಟು ; ಅವು ಯಾವುವು ; ಮತ್ತು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಬಕಾರಿ ಇಲಾಖಾ ಕಛೇರಿಗಳೆಷ್ಟು ; ಅವು ಯಾವುವು ; ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಬಕಾರಿ ಇಲಾಖಾ ಕಛೇರಿಗಳಿಗೆ ಪಾವತಿಸಲಾಗುತ್ತಿರುವ ಬಾಡಿಗೆ ಮೊತ್ತವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಬಕಾರಿ ಇಲಾಖಾ ಕಛೇರಿಗಳಿಗೆ ಸ್ವಂತ ಕಟ್ಟಡ ನಿರ್ಮಿಸಿ ದುಬಾರಿ ಬಾಡಿಗೆಯನ್ನು ತಪ್ಪಿಸಬಹುದೇ ; ಕಟ್ಟಡದ ಅಗತ್ಯತೆ ಇಲ್ಲದಿರುವ ಸಂದರ್ಭ ಬಂದಲ್ಲಿ ಬೇರೆ ಇಲಾಖೆಗಳಿಗೆ ಬಾಡಿಗೆಗೆ ನೀಡಬಹುದೇ; ಇದನ್ನು ಸರಿಪಡಿಸುವುದು ಯಾವಾಗ ?

## ಮಂಗಳೂರು ವಿಶೇಷ ಆರ್ಥಿಕ ವಲಯದಲ್ಲಿ (MSEZ) ಭೂಮಿ ಕಳೆದುಕೊಂಡ ಸಂತ್ರಸ್ಥರ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೭೩೨ (೨೧೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ವಿಶೇಷ ಆರ್ಥಿಕ ವಲಯದಲ್ಲಿ (MSEZ) ಭೂಮಿ ಕಳೆದುಕೊಂಡ ಸಂತ್ರಸ್ಥರಿಗೆ ಎಷ್ಟು ಕೈಗಾರಿಕೆಗಳಲ್ಲಿ ಉದ್ಯೋಗ ನೀಡಲಾಗಿದೆ ; ಎಷ್ಟು ಕೈಗಾರಿಕೆ ಸ್ಥಾಪಿಸಲ್ಪಟ್ಟಿದೆ ; (ವಿವರ ನೀಡುವುದು)



(ಆ) ಭೂ ಸಂತ್ರಸ್ಥರಿಗೆ ಯಾವ ಯಾವ ಕಂಪನಿಗಳಲ್ಲಿ ಹುದ್ದೆ ನೀಡಲು ತೀರ್ಮಾನಿಸಲಾಗಿದೆ ; ಯಾವ ಆಧಾರದಲ್ಲಿ ಎಷ್ಟು ಹುದ್ದೆಗಳನ್ನು ನೀಡಲಾಗಿದೆ ; ಅವರಿಗೆ ನೀಡುವ ವೇತನ ಎಷ್ಟು ;

(ಇ) ಮಂಗಳೂರು ವಿಶೇಷ ಆರ್ಥಿಕ ವಲಯ (MSEZ) ಕ್ಕಾಗಿ ಒಟ್ಟು ಸ್ವಾಧೀನಪಡಿಸಿಕೊಂಡ ಭೂಮಿ ಎಷ್ಟು ; ವಶಪಡಿಸಿಕೊಂಡ ಎಷ್ಟು ಭೂಮಿಯನ್ನು ಕೈಗಾರಿಕೆಗಳಿಗೆ ಬಳಸಲಾಗಿದೆ ; ಈ ಪ್ರದೇಶದಲ್ಲಿ ಸ್ಥಾಪಿಸಲು ಬಯಸಿರುವ ಕೈಗಾರಿಕೆಗಳಾವುವು ; (ವಿವರ ನೀಡುವುದು)

(ಈ) ಭೂ ಸಂತ್ರಸ್ಥರಿಗೆ ಉದ್ಯೋಗ ನೀಡುವಲ್ಲಿ ಜಿಲ್ಲಾಡಳಿತ ವಿಫಲವಾಗಿದೆ ಎಂಬ ದೂರುಗಳಿದ್ದು, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?

## ಮಂಗಳೂರು ನಗರದ ಬಿಜೈ ಮತ್ತು ಜಪ್ಪು ಮಾರುಕಟ್ಟೆಗಳ ಕಾಮಗಾರಿಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :–**

೧೭೩೩ (೨೧೩೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ನಗರ ಬಿಜೈ ಮತ್ತು ಜಪ್ಪು ಮಾರುಕಟ್ಟೆಗಳ ಕಾಮಗಾರಿಗಳು ಪ್ರಾರಂಭಿಸಿ ೧೦ ವರ್ಷಗಳಾದರೂ ಇನ್ನೂ ಸಾರ್ವಜನಿಕರ ಉಪಯೋಗಕ್ಕೆ ಬಿಟ್ಟು ಕೊಡದೇ ಇರಲು

## ರಾಜ್ಯದಲ್ಲಿನ ಮುಜರಾಯಿ ಇಲಾಖಾ ವ್ಯಾಪ್ತಿಗೆ ಒಳಪಟ್ಟ ದೇವಾಲಯಗಳಲ್ಲಿ ಮೂಲಭೂತ ಸೌಲಭ್ಯ ಕಲ್ಪಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೨೯ (೨೧೩೧) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮುಜರಾಯಿ ವ್ಯಾಪ್ತಿಗೆ ಒಳಪಟ್ಟ ದೇವಸ್ಥಾನಗಳ ಆದಾಯವನ್ನು ದೇವಸ್ಥಾನಕ್ಕೆ ಬರುವ ಭಕ್ತರ ಮೂಲಭೂತ ಅವಶ್ಯಕತೆಗಳನ್ನು ಪೂರೈಸಲು ವಿನಿಯೋಗಿಸಲಾಗುವುದೇ; ಈ ಬಗ್ಗೆ ಏನಾದರೂ ಮಾರ್ಗಸೂಚಿಗಳಿವೆಯೇ ; (ಮಾರ್ಗಸೂಚಿಗಳಿದ್ದಲ್ಲಿ ಪ್ರತಿ ಒದಗಿಸುವುದು)

(ಆ) ರಾಜ್ಯದಲ್ಲಿ ಮುಜರಾಯಿ ಇಲಾಖೆಗೆ ಒಳಪಟ್ಟ ಕೆಲವು ದೇವಸ್ಥಾನಗಳಲ್ಲಿರುವ ಮೂಲಭೂತ ಅವಶ್ಯಕತೆಗಳು ನಿರ್ವಹಣೆ ಹಾಗೂ ನಿಯಂತ್ರಣವಿಲ್ಲದಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರಿಪಡಿಸಲು ಯಾವ ರೀತಿಯ ಕ್ರಮಕೈಗೊಳ್ಳಲಾಗುವುದು ;

(ಇ) ರಾಜ್ಯದಲ್ಲಿ ಮುಜರಾಯಿ ಇಲಾಖಾ ವ್ಯಾಪ್ತಿಗೆ ಒಳಪಟ್ಟ 'ಎ' ಮತ್ತು 'ಬಿ' ದರ್ಜೆಯ ದೇವಸ್ಥಾನಗಳಿಗೆ ಶೌಚಾಲಯ, ಶುದ್ಧ ಕುಡಿಯುವ ನೀರು ಮತ್ತು ಸಿ.ಸಿ.ಟಿ.ವಿ. ವ್ಯವಸ್ಥೆ ಕಲ್ಪಿಸಲಾಗುವುದೇ; ಇಲ್ಲವಾದಲ್ಲಿ ಕಾರಣವೇನು ; ಕಲ್ಪಿಸಲಾಗುವುದಾದಲ್ಲಿ, ಯಾವ ಕಾಲ ಮಿತಿಯೊಂದಿಗೆ ಕಲ್ಪಿಸಲಾಗುವುದು ?



## ರಾಜ್ಯದಲ್ಲಿನ ಹಾಲು ಉತ್ಪಾದಕರ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩೦ (೨೧೨೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಹಾಲು ಉತ್ಪಾದಕರ ಸಂಖ್ಯೆ ಎಷ್ಟು; ಉತ್ಪಾದನೆಯಾಗುವ ಹಾಲಿನ ಒಟ್ಟು ಪ್ರಮಾಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿರುವ ಒಟ್ಟು ಹಾಲು ಉತ್ಪಾದಕರ ಸಹಕಾರಿ ಸಂಘಗಳ ಸಂಖ್ಯೆ ಎಷ್ಟು ; ಅವುಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿರುವ ಗೋಮಾಳಗಳ ಒಟ್ಟು ವಿಸ್ತೀರ್ಣವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಅಬಕಾರಿ ಇಲಾಖೆಯಿಂದ ಸರ್ಕಾರಿ ಬೊಕ್ಕಸಕ್ಕೆ ಬರುವ ವಾರ್ಷಿಕ ಆದಾಯದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೮೩೧ (೨೧೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಬಕಾರಿ ಇಲಾಖೆಯಿಂದ ಸರ್ಕಾರದ ಬೊಕ್ಕಸಕ್ಕೆ ಬರುತ್ತಿರುವ ವಾರ್ಷಿಕ ಆದಾಯವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಋ) ಈ ಚಿಕಿತ್ಸಾಲಯಕ್ಕೆ ಎಷ್ಟು ಹುದ್ದೆಗಳು ಮಂಜೂರು ಆಗಿರುತ್ತವೆ; ಅವುಗಳಲ್ಲಿ ಎಷ್ಟು ಹುದ್ದೆಗಳು ಖಾಲಿ ಇವೆ ; ಅವುಗಳನ್ನು ತುಂಬಲು ಯಾವ ಕ್ರಮ ಕೈಗೊಳ್ಳಲಾಗಿದೆ ?

## ರಾಜ್ಯದಲ್ಲಿ ಗಣಿ ಸಂಪತ್ತನ್ನು ರಕ್ಷಿಸುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೨೭ (೨೧೨೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗಣಿ ಸಂಪತ್ತನ್ನು ರಕ್ಷಣೆ ಮಾಡಲು ಮತ್ತು ಅವಶ್ಯಕತೆಗೆ ಮೀರಿ ಅಕ್ರಮವಾಗಿ ಗಣಿಗಾರಿಕೆಯಾಗುತ್ತಿರುವುದನ್ನು ನಿಯಂತ್ರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಆ) ರಾಜ್ಯದಲ್ಲಿ ಪ್ರತಿ ವರ್ಷ ಪ್ರತಿ ಜಿಲ್ಲೆಯಿಂದ ಗಣಿಗಾರಿಕೆಯ ಮೂಲಕ ಸರ್ಕಾರದ ಬೊಕ್ಕಸಕ್ಕೆ ಬರುವ ಆದಾಯವೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಪ್ರತಿ ವರ್ಷ ಪ್ರತಿ ಜಿಲ್ಲೆಯಿಂದ ಗಣಿಗಾರಿಕೆಗೆ ವಿಧಿಸಿದ ದಂಡದ ಮೂಲಕ ಸರ್ಕಾರದ ಬೊಕ್ಕಸಕ್ಕೆ ಬರುವ ಆದಾಯವೆಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ರಾಜ್ಯದಲ್ಲಿ ಈಗ ಉದ್ಭವಿಸಿರುವ ಮರಳಿನ ಅಭಾವದಂತೆ ಮುಂದೊಂದು ದಿನ ಕೆಂಪು ಕಲ್ಲು ಮತ್ತು ಶಿಲೆಕಲ್ಲುಗಳಿಗೂ ಬರಬಹುದೆಂಬ ಚಿಂತನೆ ಸರ್ಕಾರದ ಮುಂದಿದೆಯೇ ?



## ರಾಜ್ಯದಲ್ಲಿ ಪೋಲಿಸ್ ಠಾಣೆ ಮಂಜೂರು ಮಾಡಲು ಅನುಸರಿಸುವ ಮಾರ್ಗಸೂಚಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೨೮ (೨೧೨೮) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪೋಲಿಸ್ ಠಾಣೆಗಳನ್ನು ಮಂಜೂರು ಮಾಡುವಾಗ ಅವಶ್ಯಕತೆಗನುಗುಣವಾಗಿ ಮಂಜೂರಾತಿ ಕೊಡಲಾಗುವುದೇ; ಅಥವಾ ಜನರ ಬೇಡಿಕೆಗಳಿಗುಣವಾಗಿ ಮಂಜೂರಾತಿ ನೀಡಲಾಗುವುದೇ;

(ಆ) ಕುಂದಾಪುರ ತಾಲ್ಲೂಕಿನಲ್ಲಿರುವ ಶಂಕರನಾರಾಯಣ ಹಾಗೂ ಅಮವಾಸೆ ಬೈಲು ಪೋಲಿಸ್ ಠಾಣೆಗಳಿಗೆ ಕಾರ್ಯಕ್ಷೇತ್ರಗಳ ವಿಂಗಡನೆ ಸಮರ್ಪಕವಾಗದಿರುವುದು ಇಲಾಖೆಯ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಇದನ್ನು ಸರಿಪಡಿಸಲಾಗುವುದೇ;

(ಇ) ದಕ್ಷಿಣ ರಾಜ್ಯಗಳ ಪ್ರತಿಷ್ಠೆಯ ಯೋಜನೆಗಳಲ್ಲಿ ಒಂದಾದ ವರಾಹಿ ಭೂಗರ್ಭ ಜಲ ವಿದ್ಯುತ್ ಸ್ಥಾವರವಿರುವ ಹೊಸಂಗಡಿ ಗ್ರಾಮಕ್ಕೆ ಎಲ್ಲಾ ಮೂಲಭೂತ ಅವಶ್ಯಕತೆಗಳನ್ನು ಒದಗಿಸಿಯೂ ಪೋಲಿಸ್ ಠಾಣೆ ಒದಗಿಸದಿರಲು ಕಾರಣವೇನು ; ಇದನ್ನು ಯಾವಾಗ ಸರಿಪಡಿಸಲಾಗುವುದು ?

(ಉ) ಇದಲ್ಲದೆ, ಧಾರ್ಮಿಕ ಕಾರ್ಯಕ್ರಮಗಳನ್ನು ನಡೆಸಲು ಸುಸಜ್ಜಿತವಾದ ಸಮುದಾಯ ಭವನ ಕಟ್ಟಲು ಸರ್ಕಾರ ಉದ್ದೇಶಿಸಿದೆಯೇ ?

## ಮುನವಳ್ಳಿ ಗ್ರಾಮದ ಶ್ರೀ ಪಂಚಲಿಂಗೇಶ್ವರ ದೇವಸ್ಥಾನ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೧೭೨೫ (೨೧೮೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಮುನವಳ್ಳಿ ಗ್ರಾಮದಲ್ಲಿರುವ ಪುರಾತನವಾದ ಶ್ರೀ ಪಂಚಲಿಂಗೇಶ್ವರ ದೇವಸ್ಥಾನಕ್ಕೆ ಭೇಟಿ ನೀಡುವ ಭಕ್ತರಿಗೆ ವಾಸ್ತವ್ಯ ಮಾಡಲು ಸುಸಜ್ಜಿತವಾದ ಕಟ್ಟಡ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮೂಲಭೂತ ಸೌಕರ್ಯಗಳಾದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಭಕ್ತಾಧಿಗಳು ವಾಸಿಸಲು ಯಾತ್ರಿ ನಿವಾಸ ಮತ್ತು ವಸತಿ ಗೃಹ, ಕಾಂಕ್ರೀಟ್ ರಸ್ತೆ, ಪಾರ್ಕಿಂಗ್ ವ್ಯವಸ್ಥೆ, ಬೆಳಕಿನ ವ್ಯವಸ್ಥೆ, ದಾಸೋಹ ವ್ಯವಸ್ಥೆ, ಸ್ನಾನಗೃಹ ಸುಲಭ ಶೌಚಾಲಯ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯ ಒದಗಿಸಲು ಯಾವ ಕಾಲಮಿತಿಯಲ್ಲಿ ಕ್ರಮ ಕೈಗೊಳ್ಳಲಾಗುವುದು ?



## ಶಿವಯೋಗಮಂದಿರದಲ್ಲಿ ಮಂಜೂರಾದ ಪಶು ಚಿಕಿತ್ಸಾಲಯ ಕಟ್ಟಡ ಕೂಡಲೇ ಕಟ್ಟುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೧೭೨೬ (೨೧೨೪) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆ ಶಿವಯೋಗಮಂದಿರದಲ್ಲಿ ಮಂಜೂರಾದ ಹಾಗೂ ಸ್ಥಳವನ್ನು ಇಲಾಖೆಗೆ ಹಸ್ತಾಂತರಿಸಿದ ಪಶು ಚಿಕಿತ್ಸಾಲಯ ಕಟ್ಟಡ ಕಟ್ಟುವ ಕೆಲಸವನ್ನು ಯಾರಿಗೆ ವಹಿಸಲಾಗಿದೆ ;

(ಆ) ಮಂಜೂರಾದ ಕೆಲಸ ನಿಧಾನಗತಿಯಿಂದ ಸಾಗಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಇದಕ್ಕೆ ಹಣಕಾಸಿನ ತೊಂದರೆ ಏನಾದರೂ ಇದೆಯೇ; ಈ ಕಾಮಗಾರಿಗೆ ಮಂಜೂರಾತಿ ನೀಡಿದ ದಿನಾಂಕ ಯಾವುದು ;

(ಈ) ಈ ಕೆಲಸವನ್ನು ನಿರ್ಮಿತಿ ಕೇಂದ್ರದವರಿಗೆ ವಹಿಸಿದ ಸಂಗತಿ ನಿಜವೇ ;

(ಉ) ಬಾಗಲಕೋಟೆ ಜಿಲ್ಲೆಯಲ್ಲಿ ನಿರ್ಮಿತಿ ಕೇಂದ್ರದವರಿಗೆ ವಹಿಸಿದ ಎಲ್ಲಾ ಕೆಲಸಗಳು ನಿಧಾನವಾಗಿ ಸಾಗುತ್ತಿರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಈ ಎಲ್ಲ ಕೆಲಸಗಳನ್ನು ಪಶು ಇಲಾಖೆಯ ಯಾವ ಅಧಿಕಾರಿಗಳು ಮೇಲ್ವಿಚಾರಣೆ ಮಾಡುವರು ;

ಮಾಡಬೇಕೆಂಬ ಬಗ್ಗೆ ಸಾರ್ವಜನಿಕ ಮನವಿಗಳು ಬಂದಿರುತ್ತವೆಯೇ ;

(ಆ) ಹಾಗಿದ್ದಲ್ಲಿ, ಈ ಉಪ ಪೋಲಿಸ್ ಠಾಣೆಯನ್ನು ಪೋಲಿಸ್ ಠಾಣೆಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮ ಕೈಗೋಳಲಾಗುವುದೇ ;

(ಇ) ಕಳೆದ ವರ್ಷ ಹಾಗೂ ಈ ವರ್ಷ ಸವದತ್ತಿ ಪೋಲೀಸ್ ಠಾಣೆಯಲ್ಲಿ ಮುನವಳ್ಳಿ ಉಪ ಪೋಲಿಸ್ ಠಾಣೆಯ ವ್ಯಾಪ್ತಿಯ ಎಷ್ಟು ಕೇಸುಗಳು ದಾಖಲು ಆಗಿರುತ್ತವೆ ?

## ಯರಗಟ್ಟಿ ಉಪ ಪೋಲಿಸ್ ಠಾಣೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೭೨೩ (೨೧೨೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಯರವಳ್ಳಿ ಉಪ ಪೋಲಿಸ್ ಠಾಣೆಯನ್ನು ಆಡಳಿತದ ದೃಷ್ಟಿಯಿಂದ ಪೋಲಿಸ್ ಠಾಣೆಯನ್ನಾಗಿ ಮಾಡಬೇಕೆಂಬ ಬಗ್ಗೆ ಸಾರ್ವಜನಿಕ ಮನವಿಗಳು ಬಂದಿರುತ್ತವೆಯೇ ;

(ಆ) ಹಾಗಿದ್ದಲ್ಲಿ, ಈ ಉಪ ಪೋಲಿಸ್ ಠಾಣೆಯನ್ನು ಪೋಲಿಸ್ ಠಾಣೆಯನ್ನಾಗಿ ಮೇಲ್ದರ್ಜೆಗೇರಿಸಲು ಕ್ರಮ ಕೈಗೋಳಲಾಗುವುದೇ ;



(ಇ) ಕಳೆದ ವರ್ಷ ಹಾಗೂ ಈ ವರ್ಷ ಮುರಗೋಡ ಪೋಲೀಸ್ ಠಾಣೆಯಲ್ಲಿ ಯರಗಟ್ಟಿ ಉಪ ಪೋಲಿಸ್ ಠಾಣೆಯ ವ್ಯಾಪ್ತಿಯ ಎಷ್ಟು ಕೇಸುಗಳು ದಾಖಲು ಆಗಿರುತ್ತವೆ ?

## ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಚಿಂಚಲಿ ಮಾಯಕ್ಕ ದೇವಸ್ಥಾನ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಮಹಾಂತೇಶ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ):–**

೧೭೨೪ (೨೧೨೩) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನ ಚಿಂಚಲಿ ಮಾಯಕ್ಕ ದೇವಸ್ಥಾನಕ್ಕೆ ಆಗಮಿಸುವ ಭಕ್ತರಿಗೆ ವಾಸ್ತವ್ಯಕ್ಕಾಗಿ ಸುಸಜ್ಜಿತವಾದ ಕಟ್ಟಡ ಇಲ್ಲದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ ಯಾತ್ರಿ ನಿವಾಸ ಕಟ್ಟಲು ಕ್ರಮ ಕೈಗೊಳ್ಳಲಾಗುವುದೇ;

(ಇ) ಮೂಲಭೂತ ಸೌಕರ್ಯಗಳಾದ ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಭಕ್ತಾಧಿಗಳು ವಾಸಿಸಲು ಯಾತ್ರಿ ನಿವಾಸ ಮತ್ತು ವಸತಿ ಗೃಹ, ಕಾಂಕ್ರೀಟ್ ರಸ್ತೆ, ಪಾರ್ಕಿಂಗ್ ವ್ಯವಸ್ಥೆ, ಬೆಳಕಿನ ವ್ಯವಸ್ಥೆ, ದಾಸೋಹ ವ್ಯವಸ್ಥೆ, ಸ್ನಾನಗೃಹ ಸುಲಭ ಶೌಚಾಲಯ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹಾಗಿದ್ದಲ್ಲಿ, ಮೂಲಭೂತ ಸೌಕರ್ಯ ಒದಗಿಸಲು ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಹಾಗಿದ್ದಲ್ಲಿ, ಈ ವರ್ಗದ ನೌಕರರಿಗೆ ಕನಿಷ್ಠ ವೈದ್ಯಕೀಯ ಸೌಲಭ್ಯ ಹಾಗೂ ನಿವೃತ್ತಿಯ ಎಲ್ಲಾ ಭತ್ಯೆಗಳನ್ನು ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ರೇಷ್ಮೆ ಬೆಳೆಗಾರರಿಗೆ ಪ್ರೋತ್ಸಾಹ ಧನ ನೀಡುವ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೨೦ (೨೧೨೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರೇಷ್ಮೆ ಬೆಳೆಗಾರರಿಗೆ ಕಳೆದ ಆರು ತಿಂಗಳಿಂದ ಪ್ರೋತ್ಸಾಹ ಧನವನ್ನು ನೀಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ರಾಜ್ಯದ ರೇಷ್ಮೆಬೆಳೆಗಾರರಿಗೆ ಪ್ರೋತ್ಸಾಹಧನವನ್ನು ಸರ್ಕಾರ ಬಿಡುಗಡೆ ಮಾಡದೆ ಇರಲು ಕಾರಣಗಳೇನು ; (ಮಾಹಿತಿ ನೀಡುವುದು)

(ಇ) ಪ್ರೋತ್ಸಾಹಧನವನ್ನು ಯಾವಾಗ ಎಷ್ಟು ಪ್ರಮಾಣದಲ್ಲಿ ಬಿಡುಗಡೆ ಮಾಡಲಾಗುವುದು ? (ಮಾಹಿತಿ ನೀಡುವುದು)

## ಹೈದರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳನ್ನು ಹೊರತುಪಡಿಸಿ ಇತರೆ ಜಿಲ್ಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವವರಿಗೆ ಬಡ್ತಿ ಅವಕಾಶ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) :–**

೧೭೨೧ (೨೧೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದ್ರಾಬಾದ್–ಕರ್ನಾಟಕದ ೬ ಜಿಲ್ಲೆಗಳನ್ನು ಹೊರತುಪಡಿಸಿ ರಾಜ್ಯದ ಇತರೆ ಜಿಲ್ಲೆಗಳ ಎಲ್ಲಾ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ (ಗ್ರೂಫ್ ಎ,ಬಿ,ಸಿ,ಡಿ) ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಅರ್ಹತೆ ಇದ್ದರೂ ಬಡ್ತಿ ನೀಡದೆ ಅನ್ಯಾಯ ಮಾಡುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;



(ಆ) ಹೈದ್ರಾಬಾದ್–ಕರ್ನಾಟಕ ೩೭೧ (ಜೆ) ಅಧಿನಿಯಮದನ್ವಯ ೬ ಜಿಲ್ಲೆಗಳನ್ನು ಹೊರತುಪಡಿಸಿ ಇತರೆ ಜಿಲ್ಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಅನುದಾನಿತ ಸಂಸ್ಥೆಗಳಲ್ಲಿ ಮೀಸಲಿಟ್ಟ ಹುದ್ದೆಗಳೆಷ್ಟು ; ಇದರಲ್ಲಿ ಎಷ್ಟು ಹುದ್ದೆಗಳಿಗೆ ಬಡ್ತಿ ನೀಡಲಾಗಿದೆ ಹಾಗೂ ಬಡ್ತಿ ನೀಡದೆ ಇರುವ ಹುದ್ದೆಗಳೆಷ್ಟು; (ತಾಲ್ಲೂಕುವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಹುದ್ದೆಗಳಿಗೆ ಬಡ್ತಿಯ ಮೂಲಕ ಭರ್ತಿ ಮಾಡದೆ ವಿಳಂಬ ಧೋರಣೆ ಅನುಸರಿಸಲು ಕಾರಣಗಳೇನು ;

(ಈ) ಸರ್ಕಾರ ಬಡ್ತಿ ನೀಡಲು ಯಾವ ಯಾವ ಕ್ರಮ ತೆಗೆದುಕೊಂಡಿದೆ ಹಾಗೂ ಯಾವ ಕಾಲಮಿತಿಯೊಳಗೆ ಬಡ್ತಿ ನೀಡಲು ಸೂಕ್ತ ಕ್ರಮ ಕೈಗೊಂಡಿದೆ ? (ವಿವರವಾಗಿ ಮಾಹಿತಿ ನೀಡುವುದು)

## ಮುನವಳ್ಳಿ ಉಪ ಪೋಲಿಸ್ ಠಾಣೆಯನ್ನು ಮೇಲ್ದರ್ಜೆಗೇರಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೧೭೨೨ (೨೧೨೫) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ಸವದತ್ತಿ ತಾಲ್ಲೂಕಿನ ಮುನವಳ್ಳಿ ಉಪ ಪೋಲಿಸ್ ಠಾಣೆಯನ್ನು ಆಡಳಿತದ ದೃಷ್ಟಿಯಿಂದ ಪೋಲಿಸ್ ಠಾಣೆಯನ್ನಾಗಿ

ನಿರ್ವಹಿಸಿದ ಎಲ್ಲ ದಿನಗಳಿಗೂ ಸೇರಿದಂತೆ ಭತ್ಯೆಯನ್ನು ನೀಡಲಾಗಿದೆಯೇ ;

(ಇ) ತುಮಕೂರು, ಕೋಲಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಕರ್ತವ್ಯಕ್ಕೆ ಹಾಜರಾಗಿದ್ದ ಪೋಲೀಸ್ ಸಿಬ್ಬಂದಿಗಳಿಗೆ ಭತ್ಯೆ ನೀಡಲಾಗಿದೆಯೇ ; ಹಾಗಿದ್ದಲ್ಲಿ ನೀಡಲಾಗಿರುವ ಮೊತ್ತ ಎಷ್ಟು ;

(ಈ) ಇಲ್ಲವಾದಲ್ಲಿ ನೀಡದಿರಲು ಕಾರಣವೇನು ; ಯಾವಾಗ ನೀಡಲಾಗುವುದು ;

(ಉ) ಚುನಾವಣೆ ವೇಳೆಯಲ್ಲಿ ಗ್ರೂಪ್ 'ಡಿ' ನೌಕರರು ಹಾಗೂ ಪೋಲೀಸ್ ಸಿಬ್ಬಂದಿಗಳಿಗೆ ಒದಗಿಸಿದ ದಿನದ ಭತ್ಯೆಯ ಒಟ್ಟು ಮೊತ್ತ ಎಷ್ಟು ? (ವಿವರ ನೀಡುವುದು)

## ಇತ್ತೀಚಿನ ದಿನಗಳಲ್ಲಿ ನಡೆಯುತ್ತಿರುವ ಸರಗಳ್ಳತನ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) ಮತ್ತು ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೮ (೨೧೧೬+೨೧೮೪) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚಿನ ದಿನಗಳಲ್ಲಿ ಬೆಂಗಳೂರು ಸೇರಿದಂತೆ ಹಲವು ನಗರಗಳಲ್ಲಿ ಈವರೆಗೆ ಎಷ್ಟು ಪ್ರಕರಣಗಳು ದಾಖಲಾಗಿದೆ ; ಈ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳನ್ನು ಪತ್ತೆ ಹಚ್ಚಿ ಚಿನ್ನಾಭರಣ ಕಳೆದುಕೊಂಡಿರುವವರಿಗೆ ಹಿಂತಿರುಗಿಸಲಾಗಿದೆ ;



(ಆ) ಇನ್ನೂ ಬಾಕಿ ಇರುವ ಪ್ರಕರಣಗಳು ಎಷ್ಟು ; ಸರಗಳ್ಳತನವಾದ ಸ್ಥಳ ವಿಳಾಸ ಹಾಗೂ ಚಿನ್ನಾಭರಣದ ಪ್ರಮಾಣ ಎಷ್ಟು ;

(ಇ) ಬಾಕಿ ಇರುವ ಪ್ರಕರಣಗಳನ್ನು ಯಾವಾಗ ಪತ್ತೆ ಹಚ್ಚಲಾಗುವುದು ? (ತನಿಖೆ ವಿವರಗಳನ್ನು ಸಂಪೂರ್ಣವಾಗಿ ನೀಡುವುದು)

## ದಿನಗೂಲಿ ನೌಕರರಿಗೆ ಸೌಲಭ್ಯಗಳು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೧೯ (೨೧೨೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಗೂಲಿ ನೌಕರರ ಕ್ಷೇಮಾಭಿವೃದ್ಧಿ ವಿಧೇಯಕ–೨೦೧೨ರ ಅನ್ವಯ ದಿನಗೂಲಿ ನೌಕರರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲು ವಿಧೇಯಕದಲ್ಲಿ ಅಳವಡಿಸಲಾಗಿದೆ ; ವಿಧೇಯಕದಲ್ಲಿನ ಎಲ್ಲಾ ಸೌಲಭ್ಯಗಳನ್ನು ನೌಕರರಿಗೆ ಕಲ್ಪಿಸಲಾಗಿದೆಯೇ ;

(ಆ) ಈ ವಿಧೇಯಕದ ಅನ್ವಯ ಪೂರ್ಣ ಪ್ರಮಾಣದ ಸೌಲಭ್ಯಗಳನ್ನು ನೌಕರರಿಗೆ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರ ಯಾವ ಕ್ರಮ ವಹಿಸಲಿದೆ ;

(ಇ) ಹಾಗಿದ್ದಲ್ಲಿ, ದಿನಗೂಲಿ ನೌಕರರಿಗೆ ಜೀವನ ನಿರ್ವಹಣೆ ಭತ್ಯೆ ಮತ್ತು ಮನೆ ಬಾಡಿಗೆ ಭತ್ಯೆಯನ್ನು ಶೇ.೭೫ರಷ್ಟನ್ನು ನೀಡುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಇದಕ್ಕೆ ಯಾವ ಮಾನದಂಡ ಅನುಸರಿಸಲಾಗಿದೆ ಹಾಗೂ ಇದು ಸಮಂಜಸವೇ ;

## ರಾಜ್ಯವನ್ನು ಕೊಳಚೆ ರಹಿತ ಪ್ರದೇಶವನ್ನಾಗಿ ಮಾಡುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೫ (೨೧೧೩) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ೪೯ ನಗರಗಳನ್ನು ಕೊಳಚೆ ರಹಿತ ಪ್ರದೇಶವನ್ನಾಗಿ ಮಾಡುವ ಉದ್ದೇಶದಿಂದ "ರಾಜೀವ್ ಆವಾಸ್" ಯೋಜನೆಯಡಿ ಆಯ್ಕೆ ಮಾಡಿರುವುದು ನಿಜವೇ ;

(ಆ) ಹಾಗಿದ್ದರೆ, ಆ ಪೈಕಿ ಎಷ್ಟು ಕೊಳಚೆ ಪ್ರದೇಶಗಳಲ್ಲಿ ಇದುವರೆವಿಗೆ ಆ ಯೋಜನೆ ಅನುಷ್ಠಾನಗೊಂಡಿದೆ ;

(ಇ) ಕೇಂದ್ರಕ್ಕೆ ಆ ಯೋಜನೆಯಡಿ ಪ್ರಸ್ತಾವನೆ ಸಲ್ಲಿಸಲಾಗಿದೆಯೇ; ಸಲ್ಲಿಸಿದ್ದರೆ, ಯಾವಾಗ ; ಮೊತ್ತ ಎಷ್ಟು ; (ವಿವರ ನೀಡುವುದು)

(ಈ) ಈ ಸೌಲಭ್ಯ ಬೆಂಗಳೂರು ಮಹಾನಗರ ಪಾಲಿಕೆಗೂ ಅನ್ವಯಿಸುತ್ತದೆಯೇ ?

## ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ವಸತಿ ಸೌಲಭ್ಯವನ್ನು ವಿಸ್ತರಿಸುವ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೬ (೨೧೧೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಆರ್ಥಿಕವಾಗಿ ಹಿಂದುಳಿದ ವರ್ಗಗಳಿಗೆ ವಸತಿ ಸೌಲಭ್ಯವನ್ನು ವಿಸ್ತರಿಸುವ ಸಲುವಾಗಿ ಶೇ.೧೫ರಷ್ಟು ನಿರ್ಮಿತ ಮನೆಗಳನ್ನು ಕಡ್ಡಾಯವಾಗಿ ಮೀಸಲಿಡಲು ನಗರ ಮತ್ತು ಗ್ರಾಮಾಂತರ ಯೋಜನೆ ನಿರ್ದೇಶನಾಲಯದ ಮೂಲಕ ನಿಯಮಗಳಿಗೆ ತಿದ್ದುಪಡಿ ತರಲು ಸರ್ಕಾರ ಕ್ರಮ ವಹಿಸಿದೆಯೇ ;



(ಆ) ಹಾಗಿದ್ದರೆ, ಆ ಬಗ್ಗೆ ಸರ್ಕಾರದ ಸುತ್ತೋಲೆ ಒದಗಿಸುವುದು ಮತ್ತು ಇದುವರೆವಿಗೆ ಶೇ. ೧೫ರಷ್ಟು ಮೀಸಲಾತಿಯನ್ನು ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಹಂಚಿಕೆ ಮಾಡಿದ ಮನೆಗಳ ಪಟ್ಟಿಯನ್ನು ಒದಗಿಸುವುದು ;

(ಇ) ಈ ಸೌಲಭ್ಯ ಎಲ್ಲಾ ಮಹಾನಗರ ಪಾಲಿಕೆಗಳಿಗೆ ಅನ್ವಯಿಸುತ್ತದೆಯೇ ?

## ಇತ್ತೀಚೆಗೆ ನಡೆದ ಗ್ರಾಮ ಪಂಚಾಯಿತಿ ಚುನಾವಣೆಯಲ್ಲಿ ಭಾಗವಹಿಸಿದ ಪೋಲಿಸರಿಗೆ ಭತ್ಯೆ ನೀಡುವ ಬಗ್ಗೆ

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) :–**

೧೭೧೭ (೨೧೧೭) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ನಡೆದ ಗ್ರಾಮ ಪಂಚಾಯಿತಿ ಚುನಾವಣೆಗೆ ಬೆಂಗಳೂರಿನಿಂದ, ಮಂಗಳೂರು, ಚಿಕ್ಕಮಗಳೂರು, ಬೆಳಗಾವಿ ಈ ಸ್ಥಳಗಳಿಗೆ ಪೋಲೀಸ್ ಇಲಾಖೆಯಿಂದ ಒಟ್ಟು ಎಷ್ಟು ಜನ ಪೊಲೀಸರನ್ನು ನಿಯೋಜಿಸಲಾಗಿತ್ತು ;

(ಆ) ಸದರಿ ಪೋಲೀಸರಿಗೆ ಒಂದು ದಿನದ ಭತ್ಯೆ ಎಷ್ಟು ; ಹಾಗೂ ಎಷ್ಟು ದಿನಗಳು ಕರ್ತವ್ಯ ನಿರ್ವಹಿಸಿದ್ದರು ಮತ್ತು ಕರ್ತವ್ಯ

## ಹುಣಸೂರಿನಲ್ಲಿ ಬಾಲಕರ ಹತ್ಯೆ ಮತ್ತು ಕೇಸ್ ಖುಲಾಸೆಗೊಂಡಿರುವ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೨ (೨೧೧೧) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆ ಹುಣಸೂರಿನಲ್ಲಿ ಇಬ್ಬರು ಬಾಲಕರನ್ನು ಒತ್ತೆಯಾಗಿಟ್ಟುಕೊಂಡು ಹಣಕ್ಕೆ ಬೇಡಿಕೆಯಿಟ್ಟು ತದನಂತರ ಅವರ ಹತ್ಯೆಗೈದ ಅಪರಾಧಿಗಳನ್ನು ಬಂಧಿಸಲಾಗಿದೆಯೇ; ಮೊಕದ್ದಮೆ ಯಾವ ಹಂತದಲ್ಲಿದೆ; ಸದರಿ ಅಪರಾಧಿಗಳಿಗೆ ವಿಧಿಸಿರುವ ಶಿಕ್ಷೆ ಪ್ರಮಾಣ ಎಷ್ಟು; ಅಪರಾಧಿಗಳ ಮೇಲೆ ಸಲ್ಲಿಸಿರುವ ಎಫ್.ಐ.ಆರ್. ಪ್ರತಿಯನ್ನು ನೀಡುವುದು ;

(ಆ) Popular front of India ಮತ್ತು KDF Karnataka dignity form ವಿರುದ್ಧ ಮೈಸೂರು, ಶಿವಮೊಗ್ಗ, ಹಾಸನ ಜಿಲ್ಲೆಗಳಲ್ಲಿ ಈ ಸಂಘಟನೆಗಳು ಹೂಡಲಾಗಿದ್ದ ಮೊಕದ್ದಮೆಗಳ ಸಂಪೂರ್ಣ ವಿವರ ಹಾಗೂ ಎಫ್.ಐ.ಆರ್. ಪ್ರತಿಗಳನ್ನು ನೀಡುವುದು ?

## "ಅತ್ಯಾಚಾರ ತಡೆ ಸಮಿತಿ" ವರದಿ ಬಗ್ಗೆ.

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೩ (೨೧೦೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹೆಚ್ಚುತ್ತಿರುವ ಅತ್ಯಾಚಾರ, ಲೈಂಗಿಕ ದೌರ್ಜನ್ಯ ಪ್ರಕರಣಗಳಿಗೆ ಕಡಿವಾಣ ಹಾಕಲು ನೇಮಿಸಿದ್ದ "ಅತ್ಯಾಚಾರ ತಡೆ ಸಮಿತಿ" ಅಧ್ಯಕ್ಷರಾಗಿದ್ದ ಶ್ರೀ ಎಂ.ಸಿ. ನಾಣಯ್ಯ ರವರು ರಾಜೀನಾಮೆ ನೀಡಿದ ನಂತರ ಹೊಸ ಅಧ್ಯಕ್ಷರನ್ನು ಯಾವಾಗ ನೇಮಕ ಮಾಡಲಾಗಿದೆ ;



(ಆ) ಅಧ್ಯಕ್ಷರ ನೇಮಕಾತಿ ನಂತರ ಎಷ್ಟು ಸಭೆಗಳನ್ನು ನಡೆಸಲಾಗಿದೆ; ಸದರಿ ಉಪ ಸಮಿತಿಯು ವರದಿಯನ್ನು ನೀಡಿರುವುದೇ ? (ವಿವರ ನೀಡುವುದು)

## ರಾಜ್ಯದ ಐ.ಎ.ಎಸ್, ಕೆ.ಎ.ಎಸ್ ಅಧಿಕಾರಿಗಳಿಗೆ ಸರ್ಕಾರದ ವಾಹನಗಳನ್ನು ಉಪಯೋಗಕ್ಕೆ ನೀಡುತ್ತಿರುವ ಕುರಿತು

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೪ (೨೧೧೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಐ.ಎ.ಎಸ್, ಕೆ.ಎ.ಎಸ್ ಹಾಗೂ ತತ್ಸಮಾನ ಶ್ರೇಣಿಯ ಯಾವ ಯಾವ ಅಧಿಕಾರಿಗಳಿಗೆ ಸರ್ಕಾರದ ವಾಹನಗಳನ್ನು ಅವರ ಉಪಯೋಗಕ್ಕೆ ನೀಡಲಾಗುತ್ತಿದೆ ;

(ಆ) ಆ ಅಧಿಕಾರಿಗಳಿಗೆ ಕಾರುಗಳನ್ನು ಕೊಂಡುಕೊಳ್ಳಲು ಯಾವ ಯಾವ ಶ್ರೇಣಿಗಳಿಗೆ ಎಷ್ಟು ಬೆಲೆಯ ಕಾರುಗಳನ್ನು ನೀಡಲಾಗುತ್ತದೆ; ಇದಕ್ಕೆ ಸರ್ಕಾರದ ನೀತಿ–ನಿಯಮಗಳೇನು ; (ವಿವರ ಒದಗಿಸುವುದು)

(ಇ) ಆ ಅಧಿಕಾರಿಗಳು ಉಪಯೋಗಿಸುವ ಕಾರುಗಳಿಗೆ ಸರ್ಕಾರದ ಬೊಕ್ಕಸದಿಂದ ಖರ್ಚಾಗುವ ಇಂಧನದ ವೆಚ್ಚ ಎಷ್ಟು ? (ಶ್ರೇಣಿ ಪ್ರಕಾರ ವಿವರ ಒದಗಿಸುವುದು)

ಠಾಣೆ ವ್ಯಾಪ್ತಿಯಲ್ಲಿ ಆಗಿರುವ ಸರ ಅಪಹರಣ, ದರೋಡೆ ಪ್ರಕರಣಗಳು ಎಷ್ಟು ;

(ಉ) ಅಪರಾಧಿಗಳನ್ನು ಬಂಧಿಸಲಾಗಿದೆಯೇ; ಬಂಧಿತರಾಗಿ ಬೇಲ್ ಮೂಲಕ ಹೊರ ಬಂದವರು ಎಷ್ಟು ಮಂದಿ ? (ಸಂಪೂರ್ಣ ವಿವರ ನೀಡುವುದು)

## ಹೈನುಗಾರಿಕೆಯಿಂದ ಬದುಕುವ ಜನಕ್ಕೆ ಪ್ರೋತ್ಸಾಹಧನ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೦ (೨೧೦೮) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅತೀ ಹೆಚ್ಚು ಹಾಲು ಉತ್ಪಾದಿಸುವ ಮಂಡ್ಯ ಜಿಲ್ಲೆಯಲ್ಲಿ ಬಹುತೇಕ ನೀರಾವರಿ ಇಲ್ಲದ ಹೋಬಳಿ, ತಾಲ್ಲೂಕು ಭಾಗಗಳಲ್ಲಿ ಹೈನುಗಾರಿಕೆಯಿಂದ ಬದುಕುವ ಜನಕ್ಕೆ ಕಳೆದ ಆರು ತಿಂಗಳಿಂದ ಪ್ರೋತ್ಸಾಹಧನ ವಿತರಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ವಿಳಂಬಕ್ಕೆ ಕಾರಣವೇನು;

(ಆ) ಹೈನುಗಾರಿಕೆಯಿಂದ ಬದುಕುವ ಜನರಿಗೆ ಶೀಘ್ರವಾಗಿ ಪ್ರೋತ್ಸಾಹಧನ ಬಿಡುಗಡೆ ಮಾಡಲು ಯಾವ ಕ್ರಮ ಜರುಗಿಸಲಾಗಿದೆ ;



(ಇ) ಯಾವ ಯಾವ ಜಿಲ್ಲೆಗಳ ಫಲಾನುಭವಿಗಳಿಗೆ ಎಷ್ಟೆಷ್ಟು ಪ್ರೋತ್ಸಾಹಧನವನ್ನು ನೀಡಲು ಬಾಕಿ ಇದೆ; ಎಷ್ಟು ವರ್ಷಗಳಿಂದ ಬಾಕಿ ಇಡಲಾಗಿದೆ ? (ವಿವರ ನೀಡುವುದು)

## ಕೆಂಪೇಗೌಡ ಬಡಾವಣೆಯ ನಿರ್ಮಾಣ ಕಾರ್ಯ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೧೧ (೨೧೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಾಡಪ್ರಭು ಕೆಂಪೇಗೌಡ ಬಡಾವಣೆಯ ನಿರ್ಮಾಣ ಕಾರ್ಯ ಯಾವ ಹಂತದಲ್ಲಿದೆ; ಸದರಿ ಬಡಾವಣೆಯಲ್ಲಿ ನಿವೇಶನ ಕೋರಿ ಸ್ವೀಕೃತವಾಗಿರುವ ಅರ್ಜಿಗಳ ಸಂಖ್ಯೆ ಎಷ್ಟು ; ಇದರಿಂದ ಸಂಗ್ರಹವಾದ ಹಣವೆಷ್ಟು ; ಆ ಪೈಕಿ ಎಷ್ಟು ಅರ್ಜಿದಾರರಿಗೆ ನಿವೇಶನಗಳನ್ನು ಹಂಚಲಾಗಿದೆ ;

(ಆ) ೨೦೧೪–೧೫, ೨೦೧೫–೧೬ನೇ ಸಾಲಿನಲ್ಲಿ ಬಿ.ಬಿ.ಎಂ.ಪಿ. ಹಾಗೂ ಬಿ.ಡಿ.ಎ. ವ್ಯಾಪ್ತಿಯಲ್ಲಿ ಎಷ್ಟು ಕೆರೆಗಳಿಗೆ ತಂತಿ ಬೇಲಿ ಅಥವಾ ಕಾಂಪೌಂಡ್ ನಿರ್ಮಿಸಿ ಸಂರಕ್ಷಿಸಲಾಗಿದೆ; ಇದಕ್ಕಾಗಿ ಖರ್ಚು ಮಾಡಿದ ಹಣವೆಷ್ಟು ; (ವಿವರ ನೀಡುವುದು)

(ಇ) ೨೦೧೪–೧೫ ರಿಂದ ಬೆಂಗಳೂರು ಮಹಾನಗರದಲ್ಲಿ ಎಲ್ಲೆಲ್ಲಿ ತ್ಯಾಜ್ಯ ನೀರು ಶುದ್ಧೀಕರಣ ಘಟಕಗಳ ನಿರ್ಮಾಣ ಮಾಡಲಾಗಿದೆ ? (ವಿವರ ನೀಡುವುದು)

ನಿರ್ವಹಣೆಗಾಗಿ ಕಳೆದ ೨ ವರ್ಷಗಳಿಂದ ಖರ್ಚಾಗಿರುವ ಹಣ ಎಷ್ಟು ; ಯಾವ ಯಾವ ಕಾಮಗಾರಿಗಳಿಗೆ ವೆಚ್ಚ ಮಾಡಲಾಗಿದೆ ;

(ಆ) ಈ ಕೆರೆಯನ್ನು ಮೀನುಗಾರಿಕೆ ಮಾಡಲು ಗುತ್ತಿಗೆ ನೀಡಿರುವುದು ನಿಜವೇ ; ನೀಡಿದ್ದಲ್ಲಿ ವಿವರ ನೀಡುವುದು ;

(ಇ) ಇತ್ತೀಚೆಗೆ ಸದರಿ ಕೆರೆಯಲ್ಲಿ ಮೀನುಗಳು ಸಾಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಗುತ್ತಿಗೆದಾರರಿಂದ ಈ ಕುರಿತು ದೂರು ಬಂದಿದೆಯೇ ;

(ಈ) ಈ ರೀತಿ ಮೀನುಗಳು ಸಾಯಲು ಕಾರಣವೇನು ; ಯಾವ ಯಾವ ಕಂಪನಿಗಳ ಯಾವ ಯಾವ ವಿಷಯುಕ್ತ ರಸಾಯನಿಕ ತ್ಯಾಜ್ಯ ಕೆರೆಯನ್ನು ಸೇರುತ್ತಿದೆ ; (ವಿವರ ನೀಡುವುದು)

(ಉ) ಕೆರೆಯ ನೀರು ಕಲುಷಿತಗೊಳ್ಳುತ್ತಿರುವುದನ್ನು ತಡೆಗಟ್ಟಲು ಯಾವ ರೀತಿ ಕ್ರಮಕೈಗೊಳ್ಳಲಾಗಿದೆ ?

## K.F.D ಮತ್ತು P.F.I. ಸಂಘಟನೆಗಳ ಮೇಲಿನ ಕೇಸುಗಳು

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :–**

೧೭೦೮ (೨೧೦೩) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) K.F.D ಮತ್ತು P.F.I. ಸಂಘಟನೆಗಳ ಮೇಲೆ ಇರುವ ಪೋಲೀಸ್ ದೂರುಗಳನ್ನು ಸರ್ಕಾರ ಹಿಂಪಡೆದಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ ಹಿಂಪಡೆದಿರುವ ದೂರುಗಳ ಸಂಖ್ಯೆ ಎಷ್ಟು ; ಯಾವ ಯಾವ ದೂರುಗಳನ್ನು ಹಿಂಪಡೆಯಲಾಗಿದೆ ; (ಪ್ರಕರಣವಾರು ವಿವರ ನೀಡುವುದು)



(ಇ) ಈ ರೀತಿ ಹಿಂಪಡೆಯಲು ಕಾರಣವೇನು ? (ಪ್ರತಿ ದೂರುವಾರು ವಿವರ ನೀಡುವುದು)

## ೧೭೫ ಕೇಸುಗಳ ಖುಲಾಸೆ ಮತ್ತು ದರೋಡೆ, ಸರಗಳ್ಳತನ ಪ್ರಕರಣಗಳು

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೭೦೯ (೨೧೧೨) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೦೯–೨೦೧೦ನೇ ಸಾಲಿನಲ್ಲಿ ಮೈಸೂರು, ಶಿವಮೊಗ್ಗ, ಹಾಸನ ಜಿಲ್ಲೆಗಳಲ್ಲಿ ಬೇರೆ ಬೇರೆ ಪ್ರಕರಣಗಳಿಗೆ ಸಂಬಂಧಿಸಿದಂತೆ ಸುಮಾರು ೧೬೧೪ ಜನರ ವಿರುದ್ಧ ಹೂಡಿದ್ದ ೧೭೫ ಕೇಸನ್ನು ಹಿಂದಕ್ಕೆ ಪಡೆಯಲಾಗಿದೆಯೇ ; ಪಡೆದಿದ್ದಲ್ಲಿ ಕಾರಣಗಳೇನು ;

(ಆ) ಪಾಪ್ಯುಲರ್ ಫ್ರಂಟ್ ಆಫ್ ಇಂಡಿಯಾ ಮತ್ತು ಕರ್ನಾಟಕ ಫೋರಮ್ ಫಾರ್ ಡಿಗ್ನಿಟಿ ಸಂಘಟನೆಗಳು ಗಲಭೆಗೆ ಮೂಲ ಕಾರಣ ಹಾಗೂ ನೇರ ಹೊಣೆ, ಇವರ ಮೇಲೆ ಇದ್ದ ಕೇಸ್ ವಾಪಸ್ಸು ತೆಗೆದಿರುವುದು ಸರಿಯೇ ;

(ಇ) ಬೆಂಗಳೂರು ನಗರದಲ್ಲಿ ಇತ್ತೀಚೆಗೆ ಸರಗಳ್ಳತನ ಹೆಚ್ಚುತ್ತಿದ್ದು ರಸ್ತೆಯಲ್ಲಿ ವೃದ್ಧೆಯರು, ಒಂಟಿ ಮಹಿಳೆಯರು ಓಡಾಡುವುದು ಕಷ್ಟಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಕಳೆದ ಒಂದು ವರ್ಷದಲ್ಲಿ ಪೀಣ್ಯ ಕೈಗಾರಿಕಾ ಪ್ರದೇಶ, ಚಂದ್ರಾ ಬಡಾವಣೆ, ಬ್ಯಾಟರಾಯನಪುರ ಹಾಗೂ ವಿಜಯನಗರ ಪೋಲೀಸ್

## ಬಿ.ಬಿ.ಎಂ.ಪಿ. ಗುತ್ತಿಗೆದಾರರಿಂದ ಪೌರಕಾರ್ಮಿಕರಿಗೆ ಪರಿಷ್ಕೃತ ತುಟ್ಟಿಭತ್ಯೆ ನೀಡುತ್ತಿಲ್ಲದಿರುವ ಬಗ್ಗೆ.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೭೦೫(೨೧೦೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಬಿ.ಎಂ.ಪಿ. ಗುತ್ತಿಗೆದಾರರಿಂದ ಪೌರಕಾರ್ಮಿಕರಿಗೆ ವೇತನ ಯಾವ ರೀತಿ ಪಾವತಿಯಾಗುತ್ತಿದೆ ; ಬ್ಯಾಂಕ್ ಖಾತೆ ಮೂಲಕ ಮಾಡುತ್ತಿಲ್ಲವೇ ; ಇಲ್ಲವಾದಲ್ಲಿ, ಬ್ಯಾಂಕ್ ಖಾತೆ ಮೂಲಕ ವೇತನ ಪಾವತಿ ಮಾಡುವಂತೆ ಕ್ರಮ ಕೈಗೊಳ್ಳಬಹುದೆ ;

(ಆ) ಬಿ.ಬಿ.ಎಂ.ಪಿ ಪೌರಕಾರ್ಮಿಕರಿಗೆ ಯಾವಾಗಿನಿಂದ ಪರಿಷ್ಕೃತ ತುಟ್ಟಿಭತ್ಯೆ ಹೆಚ್ಚಳವನ್ನು ಜಾರಿಗೊಳಿಸಲಾಗಿದೆ ;

(ಇ) ಬಿ.ಬಿ.ಎಂ.ಪಿ. ಪೌರಕಾರ್ಮಿಕರಿಗೆ ಗುತ್ತಿಗೆದಾರರಿಂದ ಪರಿಷ್ಕೃತ ತುಟ್ಟಿಭತ್ಯೆ ನೀಡುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ತಿಂಗಳಿನಿಂದ ಪರಿಷ್ಕೃತ ತುಟ್ಟಿಭತ್ಯೆ ನೀಡಬೇಕಾಗಿದೆ ; ಈ ಸಂಬಂಧ ಸರ್ಕಾರ ಯಾವ ರೀತಿಯ ಕ್ರಮ ಕೈಗೊಳ್ಳಲಿದೆ ?



## ಬೆಂಗಳೂರು ಪದ್ಮನಾಭನಗರದ ಕಿತ್ತೂರು ರಾಣಿ ಚೆನ್ನಮ್ಮ ವೃತ್ತದಲ್ಲಿನ ಹೊರವರ್ತುಲ ರಸ್ತೆಯಲ್ಲಿ ಮೇಲ್ಸೇತುವೆ ನಿರ್ಮಾಣ ಕಾಮಗಾರಿ ವಿಳಂಬವಾಗಿರುವ ಬಗ್ಗೆ.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೭೦೬(೨೧೬೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಪದ್ಮನಾಭನಗರದ ಪೆಟ್ರೋಲ್ ಬಂಕ್ ಪಕ್ಕದ (ಕಿತ್ತೂರು ರಾಣಿ ಚೆನ್ನಮ್ಮ ವೃತ್ತ) ಹೊರ ವರ್ತುಲ ರಸ್ತೆಯಲ್ಲಿ ಮೇಲ್ಸೇತುವೆ ನಿರ್ಮಾಣ ಕಾಮಗಾರಿ ವಿವರ ನೀಡುವುದು ;

(ಆ) ಸದರಿ ಕಾಮಗಾರಿಯ ಗುತ್ತಿಗೆದಾರರಿಗೆ ಯಾವ ರೀತಿಯ ಷರತ್ತು ಮತ್ತು ಗಡವು ನೀಡಲಾಗಿದೆ ;

(ಇ) ಪ್ರಸ್ತುತ ಕಾಮಗಾರಿ ಯಾವ ಹಂತದಲ್ಲಿದೆ ; ಇನ್ನೂ ಎಷ್ಟು ಕೆಲಸ ಬಾಕಿ ಇದೆ ? (ವಿವರಿಸುವುದು)

## ದೇವರ ಬೀಸನಹಳ್ಳಿ ಕೆರೆಯ ನೀರು ಮೀನುಗಳು ಸಾಯುತ್ತಿರುವ ಬಗ್ಗೆ

**ಶ್ರೀ ರಾಮಚಂದ್ರ ಗೌಡ (ಪದವೀಧರರ ಕ್ಷೇತ್ರ) :–**

೧೭೦೭ (೨೧೦೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಮಹದೇವಪುರ ಕ್ಷೇತ್ರದ ದೇವರಬೀಸನಹಳ್ಳಿ ಕೆರೆಯ ನಿರ್ವಹಣೆಯ ಜವಾಬ್ದಾರಿ ಯಾರಿಗೆ ಸೇರುತ್ತದೆ ; ಸದರಿ ಕೆರೆಯ

ನಿರ್ಮಿಸುವ ಸಂಬಂಧ ಎಷ್ಟು ಎಕರೆ ಜಮೀನುಗಳನ್ನು ಸ್ವಾಧೀನಪಡಿಸಿಕೊಳ್ಳಲಾಗಿರುತ್ತದೆ ;

(ಆ) ವಿವಿಧ ಬಡಾವಣೆಗಳನ್ನು ನಿರ್ಮಿಸುವ ಸಂಬಂಧ ಸ್ವಾಧೀನಪಡಿಸಿಕೊಳ್ಳಲಾದ ಜಮೀನಿನಲ್ಲಿ ಎಷ್ಟು ಎಕರೆ ಜಾಗವನ್ನು ಡಿ ನೋಟಿಫೈ ಮಾಡಲಾಗಿದೆ ? (ಕಾರಣಗಳೊಂದಿಗೆ ಸಂಪೂರ್ಣ ಮಾಹಿತಿ ಒದಗಿಸುವುದು)

## ಸರ್ಕಾರಿ ನೌಕರರಿಗೂ ವೇತನ ಮತ್ತು ವಾಹನಗಳ ಸೌಲಭ್ಯ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೦೩(೧೪೬೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ನೌಕರರುಗಳ ಸಂಖ್ಯೆ ಎಷ್ಟು ; ಪ್ರತಿ ತಿಂಗಳು ಅವರಿಗೆ ನೀಡುತ್ತಿರುವ ಸಂಬಳ ಹಾಗೂ ಇತರೆ ಭತ್ಯೆ ಎಷ್ಟು ; (ಇಲಾಖಾವಾರು ವಿವರ ನೀಡುವುದು)

(ಆ) ರಾಜ್ಯದಲ್ಲಿ ಯಾವ ಯಾವ ದರ್ಜೆಯ ಅಧಿಕಾರಿಗಳಿಗೆ ಸರ್ಕಾರಿ ವಾಹನ ಉಪಯೋಗಿಸುವ ಸೌಲಭ್ಯಗಳನ್ನು ಒದಗಿಸಲಾಗಿದೆ ;

(ಇ) ಪೊಲೀಸ್ ಪೇದೆಗಳನ್ನೊಳಗೊಂಡು, ಪ್ರತಿ ತಿಂಗಳು ವಾಹನಗಳಿಗೆ ತಗಲುವ ವೆಚ್ಚವೆಷ್ಟು; ವಾಹನ ಉಪಯೋಗಿಸುತ್ತಿರುವ ಪ್ರತಿ ಸಿಬ್ಬಂದಿ/ಅಧಿಕಾರಿಯ ಹೆಸರು, ವಾಹನಗಳ ಸಂಖ್ಯೆಗಳೊಂದಿಗೆ, ಇಲಾಖೆ, ದರ್ಜೆ, ಇತ್ಯಾದಿ ಸಂಪೂರ್ಣ ಮಾಹಿತಿ ನೀಡುವುದು ?



## ಮರಳು, ಕಲ್ಲು, ಗಣಿಗಾರಿಕೆ, ಗ್ರಾನೈಟ್ ಗಣಿ ಪ್ರದೇಶಗಳನ್ನು ಹರಾಜು ಹಾಕಲು ನಿರ್ಧರಿಸಿರುವ ಬಗ್ಗೆ.

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೧೭೦೪(೨೧೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮರಳು ದಂಧೆಗೆ ಕಡಿವಾಣ ಹಾಕುವ ಸಲುವಾಗಿ ರಚಿಸಲಾಗಿರುವ ನೂತನ ನೀತಿಯ ಪ್ರಮುಖ ಅಂಶಗಳೇನು ;

(ಆ) ನೂತನ ನೀತಿಯಿಂದ ಮರಳು ದಂಧೆಗೆ ಯಾವ ಪ್ರಮಾಣ ಕಡಿವಾಣ ಹಾಕಲು ಸಾಧ್ಯವಾಯಿತು ; (ವಿವರ ನೀಡುವುದು)

(ಇ) ನೂತನ ನೀತಿಯಿಂದಾಗಿ ಅಕ್ರಮ ಮರಳು ದಂಧೆಯ ನಿಯಂತ್ರಣ ಕಷ್ಟವಾಗುತ್ತಿರುವುದು ನಿಜವೇ ; (ವಿವರ ನೀಡುವುದು)

(ಈ) ಈ ಹಿನ್ನೆಲೆಯಲ್ಲಿ ಸರ್ಕಾರ ಮರಳು, ಕಲ್ಲು, ಗಣಿಗಾರಿಕೆ, ಗ್ರಾನೈಟ್ ಗಣಿ ಪ್ರದೇಶಗಳನ್ನು ಹರಾಜು ಹಾಕಲು ನಿರ್ಧರಿಸಿರುವುದು ನಿಜವೇ ; ಇದರಿಂದ ಅಕ್ರಮ ಮರಳು ದಂಧೆಯ ನಿಯಂತ್ರಣ ಹೇಗೆ ಸಾಧ್ಯ ; (ವಿವರ ನೀಡುವುದು)

(ಉ) ಇದರಿಂದಾಗಿ ಮರಳಿನ ಬೆಲೆ ಹೆಚ್ಚು ದುಭಾರಿಯಾಗುವುದಿಲ್ಲವೇ ; ಹಾಗಿದ್ದಲ್ಲಿ, ವಿವರ ನೀಡುವುದು ?

(ಈ) ಹಾಗಿದ್ದಲ್ಲಿ, ಯಾವ ದೀರ್ಘಾವಧಿ ಯೋಜನೆಗಳನ್ನು ಸರ್ಕಾರವು ಈ ನಿಟ್ಟಿನಲ್ಲಿ ಆಲೋಚಿಸಿದೆ ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಮೈಸೂರಿಗೆ ಕುಡಿಯುವ ನೀರು ಸರಬರಾಜಿನಲ್ಲಿ ವ್ಯತ್ಯಯ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೭೦೦(೧೪೫೮) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಒಂದು ತಿಂಗಳಿನಿಂದ ಮೈಸೂರು ನಗರಕ್ಕೆ ನೀರು ಸರಬರಾಜಿನಲ್ಲಿ ವ್ಯತ್ಯಯವಾಗಿ ಜನರು ಪ್ರತಿಭಟನೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಮೈಸೂರು ನಗರಕ್ಕೆ ಕಬಿನಿ ನದಿಯ ಮೂಲದಿಂದ ನೀರು ಸರಬರಾಜು ಮಾಡುವ ಬಿದರಗೂಡು ಗ್ರಾಮದ ಜಾಕ್‌ವೆಲ್‌ನಲ್ಲಿ ಸ್ಥಾಪಿಸಿರುವ ಪಂಪ್‌ಸೆಟ್‌ಗಳು ಪದೇ ಪದೇ ಕೆಟ್ಟು ಹೋಗುತ್ತಿದ್ದು, ಇವು ಕಳಪೆ ದರ್ಜೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ಜಾಕ್‌ವೆಲ್ ಹಾಗೂ ಪಂಪ್‌ಸೆಟ್ ಅಳವಡಿಕೆಯನ್ನು ಯಾವ ಸಂಸ್ಥೆಗೆ ನೀಡಲಾಗಿತ್ತು ; ಈ ಸಂಸ್ಥೆಗೆ ನೋಟಿಸ್ ನೀಡಿ ಉತ್ತಮ ದರ್ಜೆ ಪಂಪ್‌ಸೆಟ್ ಅಳವಡಿಸಲು ಕ್ರಮ ಜರುಗಿಸಲಾಗುವುದೇ ?



## ಪ.ಜಾತಿ ಮತ್ತು ಪ.ಪಂಗಡದವರ ಮೇಲಿನ ದೌರ್ಜನ್ಯ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೦೧(೧೪೫೯) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೬ ವರ್ಷಗಳಿಂದ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನಾಂಗದವರ ಮೇಲೆ ಎಸಗಿದ ದೌರ್ಜನ್ಯದ ಪ್ರಕರಣಗಳೆಷ್ಟು ;

(ಆ) ಹೀಗೆ ದೌರ್ಜನ್ಯಕ್ಕೊಳಗಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಸರ್ಕಾರವು ನೀಡಿರುವ ಪರಿಹಾರದ ಮೊತ್ತವೆಷ್ಟು ;

(ಇ) ಈ ದೌರ್ಜನ್ಯ ಪ್ರಕರಣದಲ್ಲಿ ಕಾರಣರಾದವರ ಮೇಲೆ ಶಿಕ್ಷೆಗೆ ಗುರಿಪಡಿಸಿದಂತಹ ಪ್ರಕರಣಗಳೆಷ್ಟು ? (ತಾಲ್ಲೂಕು ಮತ್ತು ಠಾಣೆಗಳವಾರು ಮಾಹಿತಿ ನೀಡುವುದು)

## ಬಿ.ಡಿ.ಎ. ವತಿಯಿಂದ ಜಮೀನು ಸ್ವಾಧೀನಪಡಿಸಿಕೊಂಡಿರುವ ಬಗ್ಗೆ

**ಶ್ರೀ ರಘುನಾಥರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೧೭೦೨(೧೪೬೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೫ ವರ್ಷಗಳಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಯಾವ ಯಾವ ಹೊಸ ಬಡಾವಣೆಗಳನ್ನು

(ಇ) ಸರ್ಕಾರವು ಇಲಾಖಾ ಬದಲಾವಣೆ ಮಾಡಿಕೊಳ್ಳಲು ಇಚ್ಛಿಸುವ ನೌಕರರ ಮನವಿಯನ್ನು ಪುರಸ್ಕರಿಸಲು ಆಸಕ್ತಿ ವಹಿಸಿದೆಯೇ ;

(ಈ) ಹಾಗಿದ್ದಲ್ಲಿ, ಕಳೆದ ೩ ವರ್ಷಗಳ ಅವಧಿಯಲ್ಲಿ ಇಲಾಖಾ ಬದಲಾವಣೆ ಮಾಡಿಕೊಂಡ ಸಿಬ್ಬಂದಿ, ಅಧಿಕಾರಿಗಳ ಸಂಖ್ಯೆ ಎಷ್ಟು ? (ಪೂರ್ಣ ವಿವರ ಒದಗಿಸುವುದು)

## ಸರ್ಕಾರಿ ಇಲಾಖೆಗಳಲ್ಲಿ ಹೊರ ಗುತ್ತಿಗೆ ಸಿಬ್ಬಂದಿ ಮತ್ತು ವೇತನ ಪಾವತಿ

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೭೮ (೧೪೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ವಿವಿಧ ಇಲಾಖೆಗಳಲ್ಲಿ ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು ; (ಇಲಾಖಾವಾರು, ಹುದ್ದೆವಾರು ಮಾಹಿತಿ ಒದಗಿಸುವುದು)

(ಆ) ಖಾಲಿಯಿರುವ ಹುದ್ದೆಗಳಲ್ಲಿನ ಕಾರ್ಯನಿರ್ವಹಣೆಗಾಗಿ ಹೊರಗುತ್ತಿಗೆ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದು, ಕಳೆದ ೩ ವರ್ಷಗಳ ಅವಧಿಯಲ್ಲಿ ಪಾವತಿಸಲಾದ ವೇತನ ಮೊತ್ತ ಎಷ್ಟು ; (ಇಲಾಖಾವಾರು, ಹುದ್ದೆಗಳವಾರು ಮಾಹಿತಿ ಒದಗಿಸುವುದು)

(ಇ) ಹೊರಗುತ್ತಿಗೆಯನ್ನು ಖಾಸಗಿ ಸಂಸ್ಥೆಗೆ ನೀಡಿದ್ದು, ಸಂಸ್ಥೆಯು ಒದಗಿಸಿರುವ ಸಿಬ್ಬಂದಿಗೆ ಕಡಿಮೆ ವೇತನ ಪಾವತಿ ಮಾಡುತ್ತಾ



ಶೋಷಣೆ ಮಾಡುತ್ತಿರುವ ಅಂಶವನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; (ವಿವರ ಒದಗಿಸುವುದು)

(ಈ) ಇಂತಹ ಅಕ್ರಮ ತಡೆಗಟ್ಟಿ, ಖಾಲಿ ಹುದ್ದೆ ಭರ್ತಿ ಮಾಡುವ ನಿಟ್ಟಿನಲ್ಲಿ ಸರ್ಕಾರ ಇದುವರೆವಿಗೆ ಕೈಗೊಂಡ ಕ್ರಮಗಳು ಏನು ? (ಮಾಹಿತಿ ಒದಗಿಸುವುದು)

## ಬೆಂಗಳೂರು ನಗರದಲ್ಲಿರುವ ರುದ್ರಭೂಮಿಗಳು ಒತ್ತುವರಿಯಾಗಿರುವುದು

**ಶ್ರೀ ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೭೯ (೧೪೫೫)ಮಾನ್ಯ ಮುಖ್ಯಮಂತ್ರಿಯವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿರುವ ಸ್ಮಶಾನಗಳು/ರುದ್ರಭೂಮಿಗಳು ಎಷ್ಟು ; ಇವುಗಳಲ್ಲಿ ಹೂಳುವ, ಕಟ್ಟಿಗೆಗಳನ್ನು ಬಳಸುವ ಮತ್ತು ವಿದ್ಯುತ್ ಚಿತಾಗಾರಗಳು ಎಷ್ಟು ; (ಪ್ರದೇಶವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಮೃತರನ್ನು ಹೂಳುವಲ್ಲಿ ಸ್ಮಶಾನಗಳಲ್ಲಿ ಜಾಗದ ಕೊರತೆ ಕಂಡುಬರುತ್ತಿರುವುದು ನಿಜವೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕಂಡುಕೊಂಡ ಅಂಶಗಳು ಮತ್ತು ಪರಿಹಾರದ ನಿಟ್ಟಿನಲ್ಲಿ ಸರ್ಕಾರದ ಆಲೋಚನೆ ಏನು ; (ವಿವರ ನೀಡುವುದು)

(ಇ) ಹಲವಾರು ಸ್ಮಶಾನಗಳು ಒತ್ತುವರಿಯಾಗಿರುವ, ಮೂಲ ಸೌಲಭ್ಯದ ಕೊರತೆ, ಸ್ವಚ್ಛತೆಯ ಅಸಮರ್ಪಕ ನಿರ್ವಹಣೆ ಅಂಶಗಳನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ;

ದಿನಾಂಕಗಳಂದು ಜಮೀನು ಬಿಡುಗಡೆ ಮಾಡಲಾಗಿದೆ ; ಪ್ರತಿ ಒದಗಿಸುವುದು ; ಇನ್ನು ಎಷ್ಟು ಜಮೀನನ್ನು ಎಲ್ಲಿ ಬಿಡುಗಡೆ ಮಾಡಬೇಕಾಗಿದೆ ; (ವಿವರ ಒದಗಿಸುವುದು)

(ಉ) ಸೊಸೈಟಿ ಕಾಯ್ದೆಯನ್ವಯ ನೋಂದಣಿಯಾಗಿರುವ ಬಿ.ಡಿ.ಎ. ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರಿಗೆ ಸರ್ಕಾರದಿಂದ ನೀಡಿರುವ ಜಮೀನಿನಲ್ಲಿ ಶೇ.೧೦ರಷ್ಟು ನಿವೇಶನ ಹಂಚಿಕೆ ಮಾಡುವ ಅಧಿಕಾರ ಇದೆಯೆ ; ಹೇಗೆ ? (ವಿವರ ನೀಡುವುದು)

## ಬೆಂಗಳೂರು ನಗರದ ಟ್ರಾಫಿಕ್ ಸಿಗ್ನಲ್‌ಗಳಲ್ಲಿನ ಸಿ.ಸಿ.ಟಿ.ವಿ ಕ್ಯಾಮರ ನಿರ್ವಹಣೆ.

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೯೭ (೧೪೫೦) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ನಗರದಲ್ಲಿ ಸಂಚಾರಿ ಸುವ್ಯವಸ್ಥೆ ದೃಷ್ಟಿಯಿಂದ ಟ್ರಾಫಿಕ್ ಸಿಗ್ನಲ್‌ಗಳು ಸೇರಿದಂತೆ ಪ್ರಮುಖ ಸ್ಥಳಗಳಲ್ಲಿ ಅಳವಡಿಸಲಾಗಿರುವ ಸಿ.ಸಿ.ಕ್ಯಾಮರಾಗಳು ಎಷ್ಟು ; ಇವುಗಳ ಅಳವಡಿಕೆ ಮತ್ತು ನಿರ್ವಹಣೆಗಾಗಿ ಕಳೆದ ೩ ವರ್ಷಗಳ ಅವಧಿಯಲ್ಲಿ ವ್ಯಯಿಸಲಾದ ಹಣ ಎಷ್ಟು ; (ವರ್ಷಾವಾರು ಪ್ರತ್ಯೇಕ ಮಾಹಿತಿ ಒದಗಿಸುವುದು)

(ಆ) ಅಳವಡಿಕೆಯ ಬಹುತೇಕ ಸಿ.ಸಿ.ಕ್ಯಾಮರಾಗಳು ಸಮರ್ಪಕ ನಿರ್ವಹಣೆ ವೈಫಲ್ಯದಿಂದ ನಿಷ್ಕ್ರಿಯವಾಗಿರುವುದನ್ನು ಸರ್ಕಾರ



ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕ್ರಮಗಳು ಏನು ;

(ಇ) ಸರಗಳ್ಳತನ, ಗುದ್ದೋಡು, ಸಮಾಜ ದ್ರೋಹಿ ಘಟನೆಗಳು, ಸಂಚಾರಿ ಪೊಲೀಸರ ಮೇಲೆಯೇ ಕೆಲವರ ಹಲ್ಲೆ ಮುಂತಾದ ಪ್ರಕರಣಗಳಲ್ಲಿ ಪ್ರಮುಖ ಸಾಕ್ಷಿಯೆನಿಸುವ ಸಿ.ಸಿ. ಕ್ಯಾಮರಾಗಳ ಸುಸ್ಥಿತಿ, ನಿರ್ವಹಣೆಯನ್ನು ಸರ್ಕಾರವು ಗಂಭೀರವಾಗಿ ಪರಿಗಣಿಸಿದೆಯೇ ; ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಕೈಗೊಂಡ ಕಟ್ಟು ನಿಟ್ಟಿನ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ಒಂದು ಇಲಾಖೆಯಿಂದ ಮತ್ತೊಂದು ಇಲಾಖೆಗೆ ವಿಲೀನ/ ಬದಲಾವಣೆ.

**ಶ್ರೀ ಎಂ. ಶ್ರೀನಿವಾಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೬೯೮ (೧೪೫೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಸರ್ಕಾರಿ ನೌಕರರು ಒಂದು ಇಲಾಖೆಯಿಂದ ಮತ್ತೊಂದು ಇಲಾಖೆಗೆ ತಮ್ಮದೇ ವೇತನ ಶ್ರೇಣಿಯ ಹುದ್ದೆಗಳು ಕಾರ್ಯನಿರ್ವಹಿಸಲು ಇಚ್ಚಿಸಿದಲ್ಲಿ, ಇಲಾಖಾ ಬದಲಾವಣೆ ಮಾಡಿಕೊಳ್ಳುವ ನಿಟ್ಟಿನಲ್ಲಿ ನಿಯಮಾವಳಿಗಳು ಇರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಈ ನಿಟ್ಟಿನಲ್ಲಿ ಇರುವ ನಿಯಮಾವಳಿ, ಆದೇಶ ನೀತಿಗಳು ಏನು ; (ಆದೇಶ ಪ್ರತಿಗಳೊಂದಿಗೆ ಪ್ರತ್ಯೇಕ ಮಾಹಿತಿ ಒದಗಿಸುವುದು)

## ಪಶುಸಂಗೋಪನಾ ಇಲಾಖೆಯ ಮೂಲಭೂತ ಸೌಕರ್ಯಗಳ ಕುರಿತು.

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೬೭೪(೧೪೪೯) ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಕಳೆದ ೨ ವರ್ಷಗಳಲ್ಲಿ ಪಶು ಸಂಗೋಪನಾ ಇಲಾಖೆಯಿಂದ ಹೊಸ ಪಶು ಚಿಕಿತ್ಸಾ ಕೇಂದ್ರಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಹೊಸ ಪಶು ಚಿಕಿತ್ಸಾ ಕೇಂದ್ರಗಳನ್ನು ಮೂಲಭೂತ ಸೌಕರ್ಯಗಳೊಂದಿಗೆ ಮಂಜೂರು ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ;

(ಇ) ಹಾಗಿದ್ದಲ್ಲಿ, ಜಿಲ್ಲೆಯ ಯಾವ ಯಾವ ತಾಲ್ಲೂಕಿಗೆ ಎಷ್ಟು ಪಶು ಚಿಕಿತ್ಸಾ ಕೇಂದ್ರಗಳನ್ನು ಮಂಜೂರು ಮಾಡಲಾಗುವುದು ?

## ಬಿ.ಡಿ.ಎ. ವೆಲ್‌ಫೇರ್ ಅಸೋಸಿಯೇಷನ್‌ನ ಅವ್ಯವಹಾರಗಳ ಬಗ್ಗೆ.

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)–**

೧೬೭೫(೨೧೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಬಿ.ಡಿ.ಎ. ನೌಕರರ ಸಂಘ ಮತ್ತು ಬಿ.ಡಿ.ಎ. ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್ ಎಂದು ಎರಡು ಸಂಘಗಳಿವೆಯೇ ; ಇದ್ದಲ್ಲಿ ಈ ಎರಡು



ಸಂಘಗಳು ಸರ್ಕಾರದ ಯಾವ ಯಾವ ಕಾಯ್ದೆಯಡಿ ಯಾವ ಯಾವ ದಿನಾಂಕಗಳಂದು ನೋಂದಣಿಯಾಗಿವೆ ; ಎರಡು ಸಂಘಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳ ಹೆಸರು, ಹುದ್ದೆವಾರು ವಿವರ ನೀಡುವುದು ; ಮತ್ತು ಎರಡೂ ಸಂಘಗಳ ಬೈಲಾಗಳನ್ನು ಒದಗಿಸುವುದು ;

(ಆ) ಸದರಿ ಎರಡು ಸಂಘಗಳಲ್ಲಿ ಪ್ರಾಧಿಕಾರದ ನೌಕರರಿಗೆ ನಿವೇಶನ ಹಂಚಿಕೆ ಮಾಡುವಂತೆ ಬಿಡಿಎ ಜೊತೆ ಪತ್ರ ವ್ಯವಹಾರ ಮಾಡಿ ವಿನಂತಿಸಿದ ಸಂಘ ಯಾವುದು ; ನಂತರ ಸರ್ಕಾರದಿಂದ ಸಗಟು ಜಮೀನು ಹಂಚಿಕೆ ತಾತ್ವಿಕ ಒಪ್ಪಿಗೆ ನೀಡಿ ಬಿ.ಡಿ.ಎ.ಗೆ ಪತ್ರ ಬರೆದ ನಂತರ ಅದರ ಪ್ರತಿಯನ್ನು ಯಾವ ಸಂಘಕ್ಕೆ ಕಳುಹಿಸಲಾಗಿದೆ ; ಪ್ರತಿ ಒದಗಿಸುವುದು ; ಈ ತಾತ್ವಿಕ ಒಪ್ಪಿಗೆಯು ಖಚಿತ (CONFIRM) ಆಗಿದೆಯೇ ;

(ಇ) ಸರ್ಕಾರದ ತಾತ್ವಿಕ ಒಪ್ಪಿಗೆಯಂತೆ ಪ್ರಾಧಿಕಾರವು ಸಗಟು ಜಮೀನನ್ನು ಹಂತ–ಹಂತವಾಗಿ ಯಾವ ಸಂಘಕ್ಕೆ ಬಿಡುಗಡೆ ಮಾಡಿದೆ ; ಜಮೀನು ಹಂಚಿಕೆಗೆ ಮನವಿ ಸಲ್ಲಿಸಿದ್ದ ಬಿ.ಡಿ.ಎ. ನೌಕರರ ಸಂಘದ ಬದಲು ಬಿ.ಡಿ.ಎ ಎಂಪ್ಲಾಯೀಸ್ ವೆಲ್‌ಫೇರ್ ಅಸೋಸಿಯೇಷನ್‌ಗೆ ಜಮೀನು ಬಿಡುಗಡೆ ಮಾಡಿರುವುದು ನಿಜವೇ ; ಹೌದಾದಲ್ಲಿ ಮತ್ತೊಂದು ಸಂಘಕ್ಕೆ ಬಿಡುಗಡೆ ಮಾಡಲು ಕಾರಣವೇನು ;

(ಈ) ಬಿ.ಡಿ.ಎ. ಎಂಪ್ಲಾಯೀಸ್ ವೆಲ್‌ಫೇರ್ ಅಸೋಷಿಯೇಷನ್‌ಗೆ ಹಂತ–ಹಂತವಾಗಿ ಯಾವ ಯಾವ ಪ್ರದೇಶಗಳಲ್ಲಿ ಯಾವ ಯಾವ

## ಬೆಂಗಳೂರಿನ ಕೆಂಪಾಬುದಿ ಕೆರೆಯು ಕಲುಷಿತಗೊಳ್ಳುತ್ತಿರುವುದು

**ಶ್ರೀ ಟಿ.ಎ.ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೯೦ (೧೪೫೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆಂಪೇಗೌಡರು ಕಟ್ಟಿದ ಕೆಂಪಾಬುದಿ ಕೆರೆಯು ಕೊಳಚೆ ನೀರಿನಿಂದ ಕಲುಷಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಹಾಗಿದ್ದಲ್ಲಿ, ಒತ್ತುವರಿ ಪ್ರದೇಶವನ್ನು ತೆರವುಗೊಳಿಸುವುದರ ಮೂಲಕ ಕಾಯಕಲ್ಪವನ್ನು ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ಸಂಪೂರ್ಣ ಮಾಹಿತಿ ನೀಡುವುದು)

## ಪೋಲೀಸ್ ಇಲಾಖೆಯ ಆಧುನೀಕರಣ

**ಶ್ರೀ ಟಿ.ಎ.ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೯೧(೧೪೪೬) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಪೊಲೀಸ್ ಇಲಾಖೆಯ ಆಧುನೀಕರಣ ಯೋಜನೆಗಳಿಗೆ ಕೇಂದ್ರ ಸರ್ಕಾರದಿಂದ ಬಂದ ಅನುದಾನದ ಮೊತ್ತ ಎಷ್ಟು ;

(ಆ) ಈ ಅನುದಾನವನ್ನು ಯಾವ ಯಾವ ಯೋಜನೆಗಳಿಗೆ ಹಂಚಿಕೆ ಮಾಡಲಾಗಿದೆ ; ವೆಚ್ಚ ಮಾಡಿರುವ ಅನುದಾನವೆಷ್ಟು ? (ವರ್ಷಾವಾರು ಸಂಪೂರ್ಣ ಮಾಹಿತಿ ನೀಡುವುದು)



## ರೇಷ್ಮೆ ಉದ್ಯಮ ಅಭಿವೃದ್ಧಿ

**ಶ್ರೀ ಟಿ.ಎ.ಶರವಣ (ವಿಧಾನಸಭೆಯಿಂದ ಚುನಾಯಿತರಾದವರು):–**

೧೬೯೨(೧೪೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ರೇಷ್ಮೆ ಉದ್ಯಮವನ್ನು ಅಭಿವೃದ್ಧಿಗೊಳಿಸಲು ಸರ್ಕಾರವು ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಆ) ರಾಮನಗರ ಜಿಲ್ಲೆ, ಚನ್ನಪಟ್ಟಣದಲ್ಲಿ ಮೃದು ರೇಷ್ಮೆ ಕಾರ್ಖಾನೆಯನ್ನು ಸ್ಥಾಪಿಸಲು ಸರ್ಕಾರ ಚಿಂತನೆ ನಡೆಸಿದೆಯೇ ;

(ಇ) ಹಾಗಿದ್ದಲ್ಲಿ, ಇದಕ್ಕಾಗಿ ಮೀಸಲಿಟ್ಟ ಹಣವೆಷ್ಟು ; ಖರ್ಚು ಮಾಡಿದ ಹಣವೆಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ರಾಜ್ಯ ಸರ್ಕಾರದ ನಿವೃತ್ತ ನೌಕರರ ವಿವರ

**ಶ್ರೀ ಗೋ. ಮಧುಸೂದನ್ (ಪದವೀಧರರ ಕ್ಷೇತ್ರ) :–**

೧೬೯೩(೧೪೪೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ವಯೋನಿವೃತ್ತಿ ಹಾಗೂ ಸ್ವಯಂ ನಿವೃತ್ತಿ ಪಡೆದ ಸರ್ಕಾರಿ ನೌಕರರ ಸಂಖ್ಯೆ ಎಷ್ಟು ; (ಇಲಾಖಾವಾರು ವಿವರ ನೀಡುವುದು)

(ಆ) ಇದರಿಂದಾಗಿ ಖಾಲಿಯಾಗಿರುವ ಎಷ್ಟು ಹುದ್ದೆಗಳನ್ನು ಸರ್ಕಾರ ಭರ್ತಿ ಮಾಡಿದೆ?(ಇಲಾಖಾವಾರು ವಿವರ ನೀಡುವುದು)

ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಒಟ್ಟು ಪ್ರಶ್ನೆಗಳು – ೮೮**

**ಪಟ್ಟಿ – ೧೯**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೊಂಬತ್ತನೆ ಅಧಿವೇಶನ

**ಗುರುವಾರ, ದಿನಾಂಕ : ೨೩ನೇ ಜುಲೈ, ೨೦೧೫**

---

## ಸಮೂಹ – IV

೧. ಮುಖ್ಯಮಂತ್ರಿಗಳು

೨. ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪಶುಸಂಗೋಪನೆ ಹಾಗೂ ಮುಜರಾಯಿ ಸಚಿವರು

೩. ಗೃಹ ಸಚಿವರು

೪. ನಗರಾಭಿವೃದ್ಧಿ ಸಚಿವರು

೫. ಸಣ್ಣ ಕೈಗಾರಿಕೆ ಸಚಿವರು

---